ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ಕನ್ನಡದಿನ ಪತ್ರಿಕೆ

ರಾಯಚೂರಿನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 ಸಂಚಿಕೆ Issuse : 173 ದಿನಾಂಕ : 23-04-2026 Date : 23-04-2026 ಗುರುವಾರ Thursday RNI: Karkan/2023/89199 Post Reg No.: RCR/L/RNP/98/2025-2027 ರಾಯಚೂರು Raichur ಪುಟ : Pages : 04 ರೂ Rs. 2

## ಯರಜಂತಿಯಲ್ಲಿ ಸಿಡಿಲು ಬಡಿದು ಮಹಿಳೆ ಸಾವು

**ರಾಯಚೂರು,ಏ.22-**ಜಿಲ್ಲೆಯ ವಿವಿಧಡೆ ಗುಡುಗು ಸಿಡಿಲು ಮಿಂಚು ಸಹಿತ ಜೋರು ಮಳೆಯಾಗಿದ್ದು ನಾನಾ ಅವಾಂತರ ಸೃಷ್ಟಿಯಾಗಿವೆ. ಲಿಂಗಸೂಗೂರು ತಾಲೂಕಿನ ಯರಜಂತಿ ಬಳಿ ಬಸವನ ಬಗಡಿ ದೊಡ್ಡಿಯಲ್ಲಿ ಸಿಡಿಲು ಬಡಿದು ರೈತ ಮಹಿಳೆ ಸಾವನ್ನಪ್ಪಿದ್ದಾರೆ.

40 ವರ್ಷದ ದುರುಗಮ್ಮ ಸಿಡಿಲಿಗೆ ಬಲಿಯಾದ ರೈತ ಮಹಿಳೆ.

ಮಳೆ ಹಿನ್ನೆಲೆ ಬಣವೆಗೆ ತಾಡಪಾಲು ಹೊದಿಸುವ ವೇಳೆ ಸಿಡಿಲು ಬಡಿದಿದೆ. ಸಿಡಿಲಿನ ಹೊಡೆತಕ್ಕೆ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ.

ಲಿಂಗಸುಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಮಾನ್ವಿ ತಾಲೂಕಿನ ಹಿರೇದಿನ್ನಿ ಗ್ರಾಮದಲ್ಲಿ ಸಿಡಿಲು ಬಡಿದು ತೆಂಗಿನ ಮರ ಹೊತ್ತಿ ಉರಿದಿದೆ. ಸಿಡಿಲು ಬಡಿದು ಮರ ಹೊತ್ತಿ ಉರಿಯುವುದು ಕಂಡು ಜನ ಆತಂಕಕ್ಕೊಳಗಾಗಿದ್ದರು. ಬಿಸಿಲಿನಿಂದ ಕಂಗೆಟ್ಟ ಬಿಸಿಲನಾಡು ಜನರಿಗೆ ಒಂದೆಡೆ ಮಳೆ ತಂಪೆರೆದರೆ ಇನ್ನೊಂದಡೆ ಸಿಡಿಲು ಬಡಿದು ಅನಾಹುತ ಸಂಭವಿಸಿದೆ.

## ಮಾಹಿತಿ ಆಯೋಗದ ಆದೇಶ: ವಿಚಾರಣಾಧಿಕಾರಿ ನೇಮಕಾತಿ ರದ್ದು, 30 ದಿನಗಳಲ್ಲಿ ವರದಿ ಸಲ್ಲಿಸಲು ಸೂಚನೆ

**ರಾಯಚೂರು, ಏ.22-** ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠವು ಪ್ರಕರಣ ಸಂಖ್ಯೆ 9958ಕ್ಕೆ ಸಂಬಂಧಿಸಿದಂತೆ ಮಹತ್ವದ ಆದೇಶ ನೀಡಿದ್ದು, ಡಿ.5ರ ಆದೇಶದ ಕಂಡಿಕೆ7ರಲ್ಲಿ ಸೂಚಿಸಿ ದಂತೆ ನೇಮಕಗೊಂಡಿದ್ದ ವಿಚಾರಣಾಧಿಕಾರಿ ಶಿವಾನಂದ ಭಜಂತ್ರಿ ಅವರ ನೇಮಕಾತಿಯನ್ನು ರದ್ದುಪಡಿಸಿದೆ.

ಮಾಹಿತಿ ಆಯೋಗ ಪೀಠದಲ್ಲಿ ವಿಚಾರಣೆ ನಡೆಸಿದ ಆಯೋಗವು, ಶಿವಾನಂದ ಭಜಂತ್ರಿ ಅವರು ಇದೇ ಪ್ರಕರಣದಲ್ಲಿ ಪ್ರತಿವಾದಿಗಳಾಗಿರುವುದರಿಂದ ಅವರನ್ನು ವಿಚಾರಣಾಧಿಕಾರಿಯಾಗಿ ನೇಮಿಸುವುದು ಸರಿಯಲ್ಲವೆಂದು ತಿಳಿಸಿ ಆ ನೇಮಕಾತಿಯನ್ನು ಅಮಾನ್ಯಗೊಳಿಸಿದೆ.


ಎಲ್ಲಾ ಪ್ರಕರಣಗಳಲ್ಲಿ ಅರ್ಜಿದಾರರು ಮತ್ತು ಪ್ರತಿವಾದಿಗಳನ್ನು ಕಛೇರಿಗೆ ಖುದ್ದಾಗಿ ಕರೆಯಿಸಿಕೊಂಡು, ಅವರು ನೀಡಿರುವ ಮಾಹಿತಿಗಳ ಬಗ್ಗೆ ಸಮಗ್ರ →4

## ನಾಳೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಎಸ್‌ಐಆರ್ ವಿರೋಧಿ ಪ್ರತಿಭಟನಾ ಸಮಾವೇಶ

**ರಾಯಚೂರು, ಏ. 22-**ಮತದಾನದ ಹಕ್ಕು ಕಸಿದುಕೊಳ್ಳಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ, ಏಪ್ರಿಲ್ 23ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಎಸ್‌ಐಆರ್ ವಿರೋಧಿ ಪ್ರತಿಭಟನಾ ಸಮಾವೇಶವನ್ನು ಪ್ರಗತಿಪರ ಸಂಘಟನೆಗಳು ಹಾಗೂ ಜಾತ್ಯಾತೀತ ರಾಜಕೀಯ ಪಕ್ಷಗಳಿಂದ ಆಯೋಜನೆ ಮಾಡಲಾಗಿದೆ. ದೇಶದ ವಿವಿಧ ರಾಜ್ಯಗಳಲ್ಲಿ ಲಕ್ಷಾಂತರ ಜನರ ಮತದಾನದ ಹಕ್ಕು ರದ್ದಾಗಿದೆ ಎಂದು ಆರೋಪಿಸಲಾಗಿದ್ದು, ಈ ಬೆಳವಣಿಗೆಯನ್ನು ಪ್ರಜಾತಂತ್ರಕ್ಕೆ ಧಕ್ಕೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ವಿಶೇಷವಾಗಿ ಪಶ್ಚಿಮ ಬಂಗಾಳದಲ್ಲಿ ಉಂಟಾದ ಪರಿಸ್ಥಿತಿಯು, ಇದೇ ರೀತಿಯ ಘಟನೆಗಳು ಕರ್ನಾಟಕದಲ್ಲಿಯೂ ಸಂಭವಿಸಬಹುದೆಂಬ ಆತಂಕ ವ್ಯಕ್ತಪಡಿಸಲಾಗಿದೆ.ಈ ಸಮಾವೇಶದಲ್ಲಿ ರೈತ, ಕಾರ್ಮಿಕ, ಮಹಿಳಾ, ವಿದ್ಯಾರ್ಥಿ ಹಾಗೂ ನಾಗರಿಕ ಹಕ್ಕು ಹೋರಾಟಗಾರರ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ವಿವಿಧ ಜಿಲ್ಲೆಗಳಿಂದ ನೂರಾರು ಜನರು ಸಮಾವೇಶದಲ್ಲಿ ಪಾಲ್ಗೊಳಲಿದ್ದಾರೆ.

# ರೈಲ್ವೆ ನಿಲ್ದಾಣದಿಂದ ಯರಮರಸ್ ಸ್ಥಳಾಂತರಿಸಲು ಉದ್ದೇಶಿಸಿ ಗೂಡ್ ಶೆಡ್ ಪ್ರಸ್ತಾವನೆ ರದ್ದು

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.22-**ರಾಯಚೂರು ರೈಲ್ವೆ ನಿಲ್ದಾಣದಲ್ಲಿರುವ ಗೂಡ್ಸ್ ಶೆಡನ್ನು ಯರಮರಸ್ ರೈಲು ನಿಲ್ದಾಣಕ್ಕೆ ಸ್ಥಳಾಂತರಿಸುವ ಪ್ರಸ್ತಾವವನ್ನು ದಕ್ಷಿಣ ಮಧ್ಯ ರೈಲ್ವೆ ಇಲಾಖೆ ಕೈಬಿಟ್ಟಿದೆ.

ಈ ಕುರಿತು ಗುಂತಕಲ್ ವಿಭಾಗದ ಹಿರಿಯ ವಿಭಾಗೀಯ ಎಂಜಿನಿಯರ್ (ಸಮನ್ವಯ) ಅಧಿಕೃತ ಮಾಹಿತಿ ನೀಡಿದ್ದಾರೆ. 2021ರ ಸೆ.21ರಂದು ದಕ್ಷಿಣ ಮಧ್ಯ ರೈಲ್ವೆಯ ಜನರಲ್ ಮ್ಯಾನೇಜರ್ ಗಜಾನನ್ ಮಲ್ಯ ಅವರು ಯರಮರಸ್ ನಿಲ್ದಾಣಕ್ಕೆ ಭೇಟಿ ನೀಡಿ ಗೂಡ್ಸ್ ಶೆಡ್ ಸ್ಥಳಾಂತರ ಕುರಿತು ಪರಿಶೀಲನೆ ನಡೆಸಿ ವರದಿ ಸಲ್ಲಿಸಿದ್ದರು.

ನಂತರ ಈ ಯೋಜನೆಯ ಪ್ರಗತಿ ಕುರಿತು ರಾಯಚೂರು ಜಿಲ್ಲಾ ವಾಣಿಜ್ಯ ಮಂಡಳಿ ಮಾಹಿತಿ ಕೋರಿತ್ತು. ಯರಮರಸ್ ರೈಲು ನಿಲ್ದಾಣದಲ್ಲಿ ರೈಲು ಹಳಿಯುದ್ದಕ್ಕೂ ಸುಮಾರು 10ರಿಂದ 15 ಮೀಟರ್ ಅಗಲವಿರುವ ಒಟ್ಟು 9.5 ಏಕರೆ ರೈಲ್ವೆ ಭೂಮಿ ಲಭ್ಯವಿದ್ದು, ಅದರಲ್ಲಿ ಕೆಲವು ಕಟ್ಟಡಗಳೂ ಸೇರಿವೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಆದರೆ ಅಸ್ತಿತ್ವದಲ್ಲಿರುವ ನಿಯಮಗಳು ಮತ್ತು ಆಡಳಿತಾತ್ಮಕ ಕಾರಣಗಳಿಂದ ಗೂಡ್ಸ್ ಶೆಡ್ ಸ್ಥಳಾಂತರ ಪ್ರಸ್ತಾವವನ್ನು ಕೈಬಿಡಲಾಗಿದೆ. ಈ ಹಿನ್ನೆಲೆಯಲ್ಲಿ ಗತಿ ಶಕ್ತಿ ಉಪಕ್ರಮದಡಿ ಈ ಯೋಜನೆಗೆ ಸಂಬಂಧಿಸಿದ ಯಾವುದೇ ಚಟುವಟಿಕೆಗಳು ಪ್ರಸ್ತುತ ನಡೆಯುತ್ತಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಹಣಕೊರತೆ: ರಾಯಚೂರು ರೈಲು ನಿಲ್ದಾಣದಿಂದ ಯರಮರಸ್‌ಗೆ ಗೂಡ್ ಶೆಡ್ ಸ್ಥಳಾಂತರ ಕುರಿತಂತೆ ಸರಿ →4

# ಮಹಿಳಾ ಮೀಸಲಾತಿ ಕಾಂಗ್ರೆಸ್ ಸೇರಿ ಹಲವು ರಾಜಕೀಯ ಪಕ್ಷಗಳ ಅಸಹಕಾರ

## ಮಸೂದೆ ಜಾರಿಗೆ ಬೆಂಬಲಿಸಲಿ- ಎಂ.ವಿರೂಪಾಕ್ಷಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.22-**ಕೇಂದ್ರ ಸರ್ಕಾರ ಜಾರಿಗೆ ತರಲು ಉದ್ದೇಶಿಸಿದ್ದ ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ಸೇರಿ ಅನೇಕ ರಾಜಕೀಯ ಪಕ್ಷಗಳು ಬೆಂಬಲಿಸದೇ ಇರುವದರಿಂದ ಸೋತು ಹೋಗಿದ್ದು ಕೂಡಲೇ ಮತ್ತೊಮ್ಮ ಮಸೂದೆ ಅಂಗೀಕಾರಗೊಳಿಸಲು ಎಲ್ಲಾ ರಾಜಕೀಯ ಪಕ್ಷಗಳು ಬೆಂಬಲಿಸಬೇಕೆಂದು ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವಿರೂಪಾಕ್ಷಿ ಹೇಳಿದರು.

ಅವರಿಂದು ಮಾಧ್ಯಮಗೊಷ್ಟಿಉದ್ದೇಶಿಸಿ ಮಾತನಾಡಿ, ಕಳೆದ 77 ವರ್ಷಗಳಿಂದ ಮಹಿಳಾ ಮೀಸಲಾತಿ ಕಾಯ್ದೆಯಾಗಿ ರೂಪಿಸಬೇಕೆನ್ನುವ ಪ್ರಯತ್ನ ಪುರುಷ ಪ್ರಧಾನ ಮನಸ್ಸುಗಳಿಂದ ಜಾರಿಯಾಗದೇ ಹೋಗಿದೆ. ದೇಶದ →4

# ಗುತ್ತಿಗೆ ಕಾರ್ಮಿಕರ ಸಮಸ್ಯೆಗಳ ಕುರಿತು ಚರ್ಚೆಗೆ 24 ರಂದು ಟಿಯುಸಿಐ ಜಿಲ್ಲಾ ಕಾರ್ಮಿಕ ಸಮಾವೇಶ-ಎಂ.ಗಂಗಾಧರ

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.22-**ಗುತ್ತಿಗೆ ಕಾರ್ಮಿಕರ ನ್ನು ಖಾಯಂಗೊಳಿಸುವುದು, ಖಾಯಂಗೊಳಿಸುವವರೆಗೆ, ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವುದು ಸೇರಿದಂತೆ ರಾಜ್ಯದ ಗುತ್ತಿಗೆ ಕಾರ್ಮಿಕರ ವಿವಿಧ ಸಮಸ್ಯೆಗಳ ಕುರಿತು ಚರ್ಚಿಸಲು ಏ.24ರಂದು ಜಿಲ್ಲಾ ಮಟ್ಟದ ಕಾರ್ಮಿಕರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ಟ್ರೇಡ್ ಯೂನಿಯನ್ ಸೆಂಟರ್ ಆಫ್ ಇಂಡಿಯಾದ ರಾಜ್ಯ ಕಾರ್ಯದರ್ಶಿ ಎಂ.ಗಂಗಾಧರ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಗುತ್ತಿಗೆ ಪದ್ಧತಿ ಎಂಬುವುದು ರಾಜಕೀಯ ಹಾಗೂ ಏಜೆನ್ಸಿಗಳ ಲಾಭಿಯೇ ಹೊರತು ಕಾರ್ಮಿಕರಪರ ಪದ್ಧತಿಯಲ್ಲ. ಖಾಸಗಿ ಹಾಗೂ ಸರ್ಕಾರಿ ಕ್ಷೇತ್ರದ ಬಹುತೇಕ ಸಿ ಮತ್ತು ಡಿ ಗ್ರೂಪ್ ನೌಕರರು ಹಾಗೂ ಕಾರ್ಮಿಕರು ದಶಕಗಳಿಂದ ಗುತ್ತಿಗೆ ಕಾರ್ಮಿಕರಾಗಿ ದುಡಿಯುತ್ತಿದ್ದಾರೆ. ವಿಶೇಷವಾಗಿ ಖಾಯಂ ಹುದ್ದೆ ಇರುವ, ಮಂಜೂರಾದ ಖಾಲಿ ಹುದ್ದೆಗಳ ಸ್ಥಾನದಲ್ಲಿಯೆ ಬಹುಸಂಖ್ಯಾತ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಆದರೆ ಈ ಗುತ್ತಿಗೆ ಕಾರ್ಮಿಕರ ದುಡಿಮೆಯನ್ನು ರಾಜ್ಯ ಸರ್ಕಾರವು ಶಕ್ತಿಮೀರಿ ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದರು.

ಗುತ್ತಿಗೆ ಕಾರ್ಮಿಕರಿಗೆ ಕಾಯಂ ಕಾರ್ಮಿಕರ ಸಂಬಳದಲ್ಲಿ ಕೇವಲ ಶೇ.25ರಷ್ಟನ್ನು ಪಾವತಿಸಲಾಗುತ್ತಿದೆ. ಪ್ರತಿ ತಿಂಗಳ ಸಂಬಳ ಪಾವತಿಯಾಗುವುದಿಲ್ಲ, ಸಾಮಾಜಿಕ ಸೌಲಭ್ಯಗಳಾದ ಭವಿಷ್ಯ ನಿಧಿ ಹಾಗೂ ಇಎಸ್‌ಐ ಕಡ್ಡಾಯವಾಗಿ ಸಿಗುತ್ತಿಲ್ಲ. ಇವರಿಗೆ 8 ತಾಸಿಗೂ ಹೆಚ್ಚು ದಿನದ ದುಡಿಮೆ ಜೊತೆಗೆ ವಾರದ ರಜೆಗಳು, ರಾಷ್ಟ್ರೀಯ ರಜೆಗಳು ಮರೀಚಿಕೆಯಗಿವೆ ಎಂದು ಆರೋಪಿಸಿದರು.

ಗುತ್ತಿಗೆ ಕಾರ್ಮಿಕ ಪದ್ಧತಿಯನ್ನು ನಿಷೇಧಿಸಿ, ಎಲ್ಲಾ ಗುತ್ತಿಗೆ ಕಾರ್ಮಿಕರ ಕಾಯಂಗೊಳಿಸಲು ಒತ್ತಾಯಿಸಿ, ಖಾಯಂ ಗೊಳ್ಳುವವರೆಗೂ ಸಮಾನ ದುಡಿಮೆಗೆ ಸಮಾನ ವೇತನ ನೀಡಬೇಕು ಎಂದು ಆಗ್ರಹಿಸಿ ಏ.24 ರಂದು ಬೆಳಗ್ಗೆ 9 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾ ಮಟ್ಟದ ಗುತ್ತಿಗೆ ಕಾರ್ಮಿಕರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಸಮಾವೇಶದಲ್ಲಿ 1500ಕ್ಕೂ ಹೆಚ್ಚಿನ ಕಾಮೀಕರು ಸೇರುವ ನಿರೀಕ್ಷೆ ಇದೆ →4

## ಸಿಪಿಐ(ಎಂಎಲ್) ಲಿಬರೇಷನ್ ಪಕ್ಷ ಸಂಸ್ಥಾಪನಾ ದಿನಾಚರಣೆ

# ಸಾಮ್ರಾಜ್ಯಶಾಹಿ ವಿರುದ್ಧ ಹೋರಾಟಕ್ಕೆ ಅಜೀಜ್ ಜಹಾಗೀರದಾರ ಕರೆ

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.22-**ಜಾಗತಿಕ ಮಟ್ಟದಲ್ಲಿ ಯುದ್ಧ ಮತ್ತು ಅಶಾಂತಿ ಹೆಚ್ಚುತ್ತಿರುವ ಹಿನ್ನೆಲೆ ಅಮೆರಿಕಾ ಸಾಮ್ರಾಜ್ಯಶಾಹಿ ವಿರುದ್ಧ ಹೋರಾಟ ನಡೆಸುವುದು ಅಗತ್ಯವಾಗಿದೆ ಎಂದು ಸಿಪಿಐ(ಎಂಎಲ್) ಲಿಬರೇಶನ್ ಪಕ್ಷದ ತಾಲೂಕು ಕಾರ್ಯದರ್ಶಿ ಅಜೀಜ್ ಜಾಗೀರದಾರ್ ಹೇಳಿದರು.

ನಗರದ ಚನ್ನದಾಸರ ಭವನದಲ್ಲಿ ನಡೆದ ಪಕ್ಷದ 57ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ದಲ್ಲಿ ಮಾತನಾಡಿದ ಅವರು, ಜಾಗತಿಕ ರಾಜಕೀಯ ಪರಿಸ್ಥಿತಿಯಲ್ಲಿ ಯುದ್ಧ, ಅರಾಜಕತೆ ಹಾಗೂ ರಾಜಕೀಯ ಹಸ್ತಕ್ಷೇಪ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಅಭಿಪ್ರಾಯಪಟ್ಟರು. ಇರಾನ್ ಮೇಲೆ ಅಮೆರಿಕಾ ಮತ್ತು ಇಸ್ರಾಯಿಲ್ ನಡೆಸುತ್ತಿರುವ ದಾಳಿಗಳು ಎರಡನೇ ತಿಂಗಳಿಗೆ ಮುಂದುವರೆದಿದ್ದು, ವಿಶ್ವ ರಾಜಕೀಯದಲ್ಲಿ ಗಂಭೀರ ಪರಿಣಾಮ ಬೀರಿವೆ. ಆಡಳಿತ ಬದಲಾವಣೆ ಉದ್ದೇಶದಿಂದ ದಾಳಿ ನಡೆದರೂ, ಇರಾನ್ ಪ್ರತಿರೋಧ ತೋರಿಸಿದೆ ಎಂದು ಹೇಳಿದರು.

ಯುದ್ಧದ ಪರಿಣಾಮವಾಗಿ ಅಮೆರಿಕಾದೊಳಗೇ ಜನಾಕ್ರೋಶ ವ್ಯಕ್ತವಾಗುತ್ತಿದ್ದು, ಯುರೋಪಿನ ರಾಷ್ಟ್ರಗಳು ಕೂಡ ದೂರವಾಗುತ್ತಿರುವ ಲಕ್ಷಣಗಳು →4

## 24ರಂದು ರಾಗ ತರಂಗಿಣಿ ಮೇಲೋಡಿಸ್‌ನಿಂದ ನಿನ್ನ ಮರೆಯಲಾರೆ

# ಮಧುರಗೀತೆಗಳ ರಸಮಂಜರಿ-ವೀರೇಶಕುಮಾರ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.22-**ಡಾ.ರಾಜ್‌ಕುಮಾರ ಅವರ ಜನ್ಮದಿನದ ಅಂಗವಾಗಿ ರಾಗ ತರಂಗಿಣಿ ಮೆಲೋಡಿಯಸ್ ಹಾಗೂ ಸೌಜನ್ಯ ಶ್ರೀ ಸ್ಟಾರ್ ಗೋಲ್ಡ್ ಕಂಪನಿಯಿಂದ ನಿನ್ನ ಮರೆಯಲಾರೆ ಎಂಬ ಮಧುರ ಗೀತೆಗಳ ರಸಮಂಜರಿ ಕಾರ್ಯಕ್ರಮವನ್ನು ಏ.24ರ ಸಂಜೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯಕ್ರಮದ ಕಾರ್ಯದರ್ಶಿ ಡಿ.ವೀರೇಶ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಕಾರ್ಯಕ್ರಮವು ಅಂದು ಸಂಜೆ 5 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಸಲಾಗುವುದು. ಕಾರ್ಯಕ್ರಮದ ಉದ್ಘಾಟನೆಯನ್ನು ಡಾ.ರಾಜಕುಮಾರ ಅಭಿಮಾನಿಗಳ ಸಂಘದ ಗೌರವಾಧ್ಯಕ್ಷ ಬಸವರಾಜ ಕಳಸ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಕೃಷ್ಣಮೂರ್ತಿ ವಕೀಲ ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು, ಗಣ್ಯರು ಭಾಗವಹಿಸಲಿದ್ದು, ಜಿಲ್ಲೆಯ ಪ್ರತಿಭಾವಂತ →4

# ಬಸವೇಶ್ವರ ಜಯಂತಿ ಅಂಗವಾಗಿ ಅದ್ದೂರಿ ಭಾವಚಿತ್ರ ಮೆರವಣಿಗೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.22-**ಬಸವ ಜಯಂತಿಯ ಅಂಗವಾಗಿ ನಗರದ ಬೃಹಸ್ಪತಿವಾರಪೇಟೆಯ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ವೀರಶೈವ ಮಹಾಂತೇಶ ಕಲ್ಯಾಣ ಮಂಟಪದವರೆಗೆ ಜಗಜ್ಯೋತಿ ಬಸವೇಶ್ವರರ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ಮಂಗಳವಾರ ಸಂಜೆ ನಡೆಸಲಾಯಿತು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಜಿಲ್ಲಾ ವೀರಶೈವ ಲಿಂಗಾಯತ ಸಮಾಜ, ಬಸವ ಕೇಂದ್ರ, ಜಾಗತಿಕ ವೀರಶೈವ ಲಿಂಗಾಯತ ಸಮಾಜ ಹಾಗೂ ವೀರಶೈವ ರುದ್ರಸೇನಾ ಸಮಿತಿಗಳ ಸಂಯುಕ್ತ ಆಶ್ರಯದಲ್ಲಿ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು.

ಮೆರವಣಿಗೆಯ ದಿವ್ಯ ಸಾನಿಧ್ಯವನ್ನು ಕಿಲ್ಲೇಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ, ಸೋಮವಾರಪೇಟೆ ಹಿರೇಮಠದ ಅಭಿನವ ರಾಚೋಟಿ ವೀರ ಶಿವಾಚಾರ್ಯ ಸ್ವಾಮೀಜಿ ಹಾಗೂ ಮಂಗಳವಾರಪೇಟೆ ಹಿರೇಮಠದ ವೀರ ಸಂಗಮೇಶ್ವರ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಜಿಲ್ಲಾಧ್ಯಕ್ಷ ಶರಣಭೂಪಾಲ ನಾಡಗೌಡ ವಹಿಸಿದ್ದು, →4

# 25ರಂದು ಶ್ರೀ ಗಿರಿ ಅಭಯ ಆಂಜನೇಯ್ಯ ದೇವಸ್ಥಾನ ಸಮಿತಿಯಿಂದ ಗ್ರಂಥಲೋಕಾರ್ಪಣೆ, ಅಭಿನಂದನಾ ಸಮಾರಂಭ-ಬಿ.ಬಸವರಾಜ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.22-**ನಗರ ಶ್ರೀ ಗಿರಿ ಆಂಜನೇಯ್ಯ ಸ್ವಾಮಿ ಸೇವಾಸಮಿತಿಯಿಂದ ಏ.25ರಂದು ಅಭಯಾಂತರಂಗ ಗ್ರಂಥ ಲೋಕಾರ್ಪಣೆ, ಅಭಿನಂದನಾ ಸಮಾರಂಭ, ಸಾಂಸ್ಕೃತಿಕ ಹಾಗೂ ನಾಟಕ ಪ್ರದರ್ಶನ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬೆಳಿಗ್ಗೆ 10.30ಕ್ಕೆ ಆಯೋಜಿಸಲಾಗಿದೆ ಎಂದು ದೇವಸ್ಥಾನ ಸಮಿತಿ ಅಧ್ಯಕ್ಷ ಬಿ.ಬಸವರಾಜ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಕಾರ್ಯಕ್ರಮದ ಸಾನಿಧ್ಯವನ್ನು ಬೆಳಗಾವಿಯ ಚರಂತೇಶ್ವರ ಮಠದ ಶ್ರೀ ಶರಣಬಸವ ದೇವರು ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮವನ್ನು ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜ ಉದ್ಘಾಟಿಸಲಿದ್ದು, ಜ್ಯೋತಿಯನ್ನು ಸಂಸದ ಜಿ.ಕುಮಾರನಾಯಕ ಬೆಳಗಿಸಲಿದ್ದಾರೆ. ಗ್ರಂಥವನ್ನು ಶಾಸಕ ಡಾ.ಶಿವರಾಜ ಪಾಟೀಲ್ ಬಿಡುಗಡೆಗೊಳಿಸಲಿದ್ದಾರೆ. ಗ್ರಾಮೀಣ ಶಾಸಕ ಬಸನಗೌಡ ದದ್ದಲ್, ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ, ದೇವದುರ್ಗ ಶಾಸಕಿ ಜಿ.ಕರೆಮ್ಮನಾಯಕ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ದೇವಸ್ಥಾನ ಸಮಿತಿ ಅಧ್ಯಕ್ಷ ಬಿ.ಬಸವರಾ ಜವಹಿಸಿಕೊಳ್ಳಲಿದ್ದಾರೆ. ಮುಖ್ಯ ಭಾಷಣಕಾರರಾಗಿ ಕುವೆಂಪು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಬಿ.ಎಂ.ಪುಟ್ಟಯ್ಯ ಆಗಮಿಸಲಿದ್ದಾರೆ. ಕೃತಿಯ ಕುರಿತು ಸಾಹಿತ್ಯ →4

### 3.3 ಲಕ್ಷ ಅಭ್ಯರ್ಥಿಗಳು ನೋಂದಣಿ ; 745 ಕೇಂದ್ರಗಳಲ್ಲಿ ಎ.23, 24ರಂದು ಸಿಇಟಿ ಪರೀಕ್ಷೆ

# ವಸ್ತ್ರಸಂಹಿತೆ ನಿರ್ವಹಣೆಗೆ ಅಧಿಕಾರಿಗಳ ನಿಯೋಜನೆ

**ಬೆಂಗಳೂರು,ಏ.22-**ಎಂಜಿನಿಯರಿಂಗ್, ಕೃಷಿ ವಿಜ್ಞಾನ, ಪಶು ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುವ 2026ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಎಪ್ರಿಲ್ 23 ಮತ್ತು 24 ರಂದು ನಡೆಯಲಿದ್ದು, ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಹೊರನಾಡು ಮತ್ತು ಗಡಿನಾಡು ಕನ್ನಡಿಗರಿಗೆ ಎಪ್ರಿಲ್ 22ರಂದು ಕನ್ನಡ ಭಾಷಾ ಪರೀಕ್ಷೆಯು ಬೆಂಗಳೂರು, ಮಂಗಳೂರು, ವಿಜಯಪುರ ಮತ್ತು ಬೆಳಗಾವಿ ನಗರಗಳ ಒಟ್ಟು ಐದು ಕೇಂದ್ರಗಳಲ್ಲಿ ನಡೆಯಲಿದೆ. ಎ.23ರಂದು ಭೌತ ವಿಜ್ಞಾನ ಮತ್ತು ರಸಾಯನ ವಿಜ್ಞಾನ ಹಾಗೂ ಎ.24ರಂದು ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿದ್ದು, ಬಿಗಿ ಬಂದೋಬಸ್ತ್ ಮಾಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ಮಾಧ್ಯಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ನೇಮಕಾತಿ ಪರೀಕ್ಷೆಗಳಿಗೆ ಮಾಡುವ ಹಾಗೆ ಈ ಪರೀಕ್ಷೆಗೂ ಕ್ಯಾಮರಾ ಕಣ್ಗಾವಲು ಇರುತ್ತದೆ. ವೆಬ್ ಕಾಸ್ಟಿಂಗ್ ಮೂಲಕ ಎಲ್ಲ 745 ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಿದ್ದು, ಕಟ್ಟೆಚ್ಚರ ವಹಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮೇಲುಸ್ತುವಾರಿ ನಡೆಸಲಿದ್ದಾರೆ ಎಂದು ವಿವರಿಸಿದ್ದಾರೆ.

ಬೆಂಗಳೂರಿನ 163 ಕೇಂದ್ರಗಳಲ್ಲಿ ಅತಿ ಹೆಚ್ಚು ಅಂದರೆ ಒಟ್ಟು 77,604 ಅಭ್ಯರ್ಥಿಗಳು ಪರೀಕ್ಷೆ ಬರೆಯುತ್ತಿದ್ದು, ಇದರ ಕಮಾಂಡ್ ಸೆಂಟರ್ ಕೆಇಎ ಕಚೇರಿಯಲ್ಲಿ ಸ್ಥಾಪಿಸಲಾಗಿದೆ ಎಂದು ಅವರು ವಿವರಿಸಿದರು.

ಒಟ್ಟು 970 ವಿಶೇಷ ಚೇತನ ಮಕ್ಕಳು ಸಿಇಟಿ ಬರೆಯುತ್ತಿದ್ದು, ಅವರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಶ್ರವಣ ಸಾಧನ ಬಳಸಿಕೊಂಡು ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳನ್ನು ಪ್ರತ್ಯೇಕವಾಗಿ ಪರಿಶೀಲಿಸಬೇಕಾಗಿರುವ ಕಾರಣ ಅಂತಹವರು ಎರಡು ಗಂಟೆ ಮುಂಚಿತವಾಗಿ ಕೇಂದ್ರಕ್ಕೆ ಬರಬೇಕೆಂದು ಅವರು ಸಲಹೆ ನೀಡಿದ್ದಾರೆ.

ಸೂಕ್ಷ್ಮ ಪರೀಕ್ಷಾ ಕೇಂದ್ರಗಳಲ್ಲಿ ಜಾಮರ್ ಕೂಡ ಅಳವಡಿಸಿದ್ದು, ಅಕ್ರಮಗಳಿಗೆ ಅವಕಾಶ ಇಲ್ಲದಂತೆ ನಿಗಾ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅವರು ವಿವರಿಸಿದರು.

ಎರಡು ಗಂಟೆ ಮುಂಚೆ ಬನ್ನಿ: ಅಭ್ಯರ್ಥಿಗಳನ್ನು ತೀವ್ರ ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರದೊಳಗೆ ಬಿಡುವ ಕಾರಣಕ್ಕೆ ಕನಿಷ್ಠ ಎರಡು ಗಂಟೆ ಮುಂಚಿತವಾಗಿ ಅವರು ಪರೀಕ್ಷಾ ಕೇಂದ್ರಕ್ಕೆ ಹೋಗಬೇಕು. ಅಭ್ಯರ್ಥಿಯ ಮುಖ ಚಹರೆ ಮತ್ತು ಕ್ಯೂಆರ್ ಕೋಡ್ ವ್ಯವಸ್ಥೆ ಮೂಲಕ ಅಭ್ಯರ್ಥಿಯ ನೈಜತೆ ಪರಿಶೀಲನೆ ಮಾಡಲಾಗುತ್ತದೆ. ಯಾರದ್ದೋ ಪರೀಕ್ಷೆಯನ್ನು ಇನ್ಯಾರೊ ಬರೆಯುವುದನ್ನು ತಡೆಯುವ



ಉದ್ದೇಶದಿಂದ ಈ ವ್ಯವಸ್ಥೆ ಜಾರಿ ಮಾಡಿದ್ದು, ಸೀಟು ಹಂಚಿಕೆಯಾಗಿ ಕಾಲೇಜುಗಳಿಗೆ ಪ್ರವೇಶ ಆಗುವ ಸಂದರ್ಭದಲ್ಲಿ ಕೂಡ ಅಭ್ಯರ್ಥಿಯ ಭಾವಚಿತ್ರವನ್ನು ಹೋಲಿಕೆ ಮಾಡಿಯೇ ಪ್ರವೇಶ ನೀಡುವ ವ್ಯವಸ್ಥೆ ಮಾಡಿದ್ದು, ನಕಲಿ ಅಭ್ಯರ್ಥಿಗಳಿಗೆ ಸಂಪೂರ್ಣ ಕಡಿವಾಣ ಹಾಕಲಾಗಿದೆ ಎಂದು ಪ್ರಸನ್ನ ತಿಳಿಸಿದ್ದಾರೆ.

ಕಷ್ಟಪಟ್ಟು ಓದಿದ ಅಭ್ಯರ್ಥಿಗಳಿಗೆ ಯಾವುದೇ ಮೋಸ ಆಗಲು ಬಿಡುವುದಿಲ್ಲ. ಅತ್ಯಂತ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಎಲ್ಲ ರೀತಿಯ ತಯಾರಿ ಮಾಡಿಕೊಂಡಿದ್ದು, ನಿಶ್ಚಿಂತೆಯಿಂದ ಪರೀಕ್ಷೆ ಬರೆಯಬಹುದು ಎಂದು ಅವರು ಅಭಯ ನೀಡಿದ್ದಾರೆ.

ದ್ವಿತೀಯ ಪಿಯುಸಿ ಮೊದಲ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿರುವ ಅಥವಾ ಅನುತ್ತೀರ್ಣ ಆಗಿರುವವರಿಗೆ ಇನ್ನೂ ಫಲಿತಾಂಶವನ್ನು ಉತ್ತಮ ಮಾಡಿಕೊಳ್ಳಲು ಅವಕಾಶ ಇರುವ ಕಾರಣ ಯಾರೂ ಸಿಇಟಿ ಬರೆಯುವುದನ್ನು ತಪ್ಪಿಸಿಕೊಳ್ಳಬಾರದು. ಹೀಗಾಗಿ ಯಾರೆಲ್ಲ ಶುಲ್ಕ ಪಾವತಿಸಿದ್ದೀರೊ ಅವರೆಲ್ಲರೂ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಂಡು ಪರೀಕ್ಷೆ ಬರೆಯಬೇಕು. ಎರಡನೇ ಪರೀಕ್ಷೆಯ ಅಂಕಗಳನ್ನು ಕೂಡ ಸಿಇಟಿ ಫಲಿತಾಂಶಕ್ಕೆ ಪರಿಗಣಿಸಲಾಗುವುದು ಎಂದು ಪ್ರಸನ್ನ ಅವರು ಸಲಹೆ ನೀಡಿದ್ದಾರೆ.

ಅಭ್ಯರ್ಥಿಯ ಹೆಸರು, ಸಿಇಟಿ ಸಂಖ್ಯೆ, ಪ್ರಶ್ನೆ ಪತ್ರಿಕೆಯ ವರ್ಷನ್ ಕೋಡ್ ಮತ್ತು ಪ್ರಶ್ನೆ ಪತ್ರಿಕೆಯ ಕ್ರಮ ಸಂಖ್ಯೆಯನ್ನು ಸರಿಯಾಗಿ ನಮೂದಿಸಿ, ಸಂಬಂಧಿಸಿದ ವೃತ್ತಗಳನ್ನು ಶೇಡ್ ಮಾಡಬೇಕು. ಈ ಹಿಂದೆ ಈ ಮಾಹಿತಿ ಕೂಡ ಸರಿಯಾಗಿ ಭರ್ತಿ ಮಾಡದಿರುವ ಕಾರಣ ಫಲಿತಾಂಶ ಪ್ರಕಟಣೆಗೂ ಸಮಸ್ಯೆ ಆಗಿತ್ತು. ಹೀಗಾಗಿ ಅಭ್ಯರ್ಥಿಗಳು ಎಚ್ಚರವಹಿಸಬೇಕು. ಅಭ್ಯಾಸ ಮಾಡಲಿ ಎನ್ನುವ ಕಾರಣಕ್ಕೆ ಕರಡು ಒಎಂಆರ್ ಸೀಟ್ ಕೂಡ ಪ್ರವೇಶ ಪತ್ರದ ಜತೆ ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ನೀಡಿದ್ದು, ಅದನ್ನು ಅಭ್ಯಾಸ ಮಾಡುವುದರ ಮೂಲಕ ಅನಗತ್ಯ ತಪ್ಪುಗಳನ್ನು ತಡೆಯಬೇಕು ಎಂದು ಅವರು ಸಲಹೆ ನೀಡಿದ್ದಾರೆ.

**➤ ವಸ್ತ್ರ ಸಂಹಿತೆ:**

- **ಅನಗತ್ಯ ಗೊಂದಲ ತಪ್ಪಿಸಲು ಇದೇ ಮೊದಲ ಬಾರಿಗೆ ಪ್ರತಿ ಕೇಂದ್ರಕ್ಕೆ ಒಬ್ಬ ವಸ್ತ್ರಸಂಹಿತೆ ಅಧಿಕಾರಿಯನ್ನು ನೇಮಿಸಲಾಗಿದೆ ಎಂದು ಪ್ರಸನ್ನ ತಿಳಿಸಿದರು.**
- **ಪುರುಷ/ಮಹಿಳಾ ಅಭ್ಯರ್ಥಿಗಳು ಅರ್ಧ ತೋಳಿನ ಬಟ್ಟೆ ಧರಿಸಬೇಕು.**
- **ಸಾಧ್ಯವಾದಷ್ಟು ಕಾಲರ್ ಇಲ್ಲದಿರುವುದನ್ನು ಹಾಕಿಕೊಂಡು ಬಂದರೆ ಉತ್ತಮ.**
- **ಪುರುಷರು, ಜೇಬು ಇಲ್ಲದ/ಕಡಿಮೆ ಜೇಬುಗಳಿರುವ ಸರಳ ಪ್ಯಾಂಟ್ ಧರಿಸಬೇಕು.**
- **ಕುರ್ತಾ ಪೈಜಾಮ/ಜೀನ್ಸ್ ಪ್ಯಾಂಟ್‌ಗೆ ಅವಕಾಶ ಇರುವುದಿಲ್ಲ. ಶೂ ಕೂಡ ನಿಷೇಧಿಸಲಾಗಿದೆ.**
- **ಮೊಬೈಲ್, ಬ್ಲೂಟೂತ್, ಇಯರ್ ಫೋನ್, ಮೈಕ್ರೋ ಫೋನ್ ಇತ್ಯಾದಿ ಎಲೆಕ್ಟ್ರಾನಿಕ್ ವಸ್ತುಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ.**
- **ಒಮ್ಮೆ ಕೆಇಎ ವೆಬ್‌ಸೈಟ್‌ನಲ್ಲಿ ಇರುವ ವಸ್ತ್ರಸಂಹಿತೆಯ ವಿವರಗಳನ್ನು ಓದಿಕೊಂಡು, ಆ ಪ್ರಕಾರ ಪರೀಕ್ಷೆಗೆ ಬರಬೇಕು ಎಂದು ಅವರು ಸಲಹೆ ನೀಡಿದ್ದಾರೆ.**
- **ತಪ್ಪಿಲ್ಲದೆ ಒಎಂಆರ್ ಭರ್ತಿ ಮಾಡಿ: ಒಎಂಆರ್ ಶೀಟ್‌ನಲ್ಲಿ ಅಭ್ಯರ್ಥಿಗಳು ತಮ್ಮ ಸ್ವವಿವರಗಳನ್ನು ಯಾವುದೇ ತಪ್ಪಿಲ್ಲದೆ ದಾಖಲಿಸಬೇಕು ಎಂದು ಪ್ರಸನ್ನ ಅವರು ಸಲಹೆ ನೀಡಿದ್ದಾರೆ.**

# ಖರ್ಗೆ ಅವರು ಭಯೋತ್ಪಾದಕರು ಮತ್ತು ಭಯೋತ್ಪಾದಕರಿಗೆ ಭಯ ಹುಟ್ಟಿಸುತ್ತಿರುವವರ ನಡುವಿನ ವ್ಯತ್ಯಾಸ ಗುರುತಿಸುತ್ತಿಲ್ಲ-ಉಪ ರಾಷ್ಟ್ರಪತಿ



**ಬೀದರ್,ಏ.22-**ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಯೋತ್ಪಾದಕರು ಮತ್ತು ಭಯೋತ್ಪಾದಕರಿಗೆ ಭಯ ಹುಟ್ಟಿಸುವವರ ನಡುವೆ ವ್ಯತ್ಯಾಸ ಗುರುತಿಸುತ್ತಿಲ್ಲ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕುಟುಕಿದರು.

ಇಂದು ಬೀದರ್‌ನ ಶ್ರೀ ಚನ್ನಬಸವಾಶ್ರಮದಲ್ಲಿ ಹಿರೇಮಠ ಸಂಸ್ಥಾನದ ಡಾ.ಬಸವಲಿಂಗ ಪಟ್ಟದೇವರು ಮಹಾಸ್ವಾಮೀಜಿಯವರ ಅಮೃತ ಮಹೋತ್ಸವ ಆಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಖರ್ಗೆ ಅವರ ಉಪಸ್ಥಿತಿಯಲ್ಲೇ ಈ ಹೇಳಿಕೆ ನೀಡಿದ್ದಾರೆ.

ಭಯೋತ್ಪಾದಕರು ಮತ್ತು ಭಯೋತ್ಪಾದಕರಿಗೆ ಭಯ ಹುಟ್ಟಿಸಿರುವವರ ನಡುವಿನ ವ್ಯತ್ಯಾಸ ನನಗೆ ಅರ್ಥವಾಗುತ್ತದೆ. ಕೆಲವೊಮ್ಮೆ ಖರ್ಗೆ ಜೀ ಅವರು ಭಯೋತ್ಪಾದಕರು ಮತ್ತು ಭಯೋತ್ಪಾದಕರಿಗೆ ಟೆರ್ರ ಆಗಿರುವವರ ನಡುವಿನ ವ್ಯತ್ಯಾಸ ಗುರುತಿಸುತ್ತಿಲ್ಲ. ಇಲ್ಲದಿದ್ದರೆ, ಅವರೊಂದಿಗೆ ನನಗೆ ಯಾವುದೇ ಸಮಸ್ಯೆ ಇಲ್ಲ. ಖರ್ಗೆ ಅವರು ನನಗೆ ತುಂಬಾ ಒಳ್ಳೆಯ ಸ್ನೇಹಿತ ಎಂದು ನಯವಾಗಿಯೇ ಟಾಂಗ್ ಕೊಟ್ಟರು.

ತಮಿಳುನಾಡು ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ.ವೇಣುಗೋಪಾಲ್ ಅವರೊಂದಿಗೆ ಚೆನ್ನೈನಲ್ಲಿ ಮಂಗಳವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುತ್ತಾ, ಪ್ರಧಾನಿ ನರೇಂದ್ರ ಮೋದಿ ಅವರನ್ನು ಟಭಯೋತ್ಪಾದಕಟಿ ಎಂದು ಕರೆಯುವ ಮೂಲಕ ಖರ್ಗೆ ವಿವಾದದಲ್ಲಿ ಸಿಲುಕಿದ್ದರು. ಬಳಿಕ ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿದ್ದ ಅವರು, ಪ್ರಧಾನಿ ಜನರನ್ನು ಮತ್ತು ರಾಜಕೀಯ ಪಕ್ಷಗಳನ್ನು ಭಯಭೀತಿಗೊಳಿಸುತ್ತಿದ್ದಾರೆ ಎಂದು ಹೇಳಿದ್ದರು.

ಈ ಹೇಳಿಕೆ ಸಂಬಂಧ ಖರ್ಗೆ ವಿರುದ್ಧ ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದ್ದು, ಇದು ದೇಶದ 140 ಕೋಟಿ ಜನರ ಜನಾದೇಶಕ್ಕೆ ಅವಮಾನ ಎಂದಿದೆ. ಕೇಂದ್ರ ಸಚಿವ ಜೆ.ಪಿ.ನಡ್ಡಾ, ಖರ್ಗೆ ಅವರನ್ನು ತರಾಟೆಗೆ ತೆಗೆದುಕೊಂಡು, ಜನರು ಕಾಂಗ್ರೆಸ್ ಪಕ್ಷಕ್ಕೆ ಸೂಕ್ತ ಉತ್ತರ ನೀಡುತ್ತಾರೆ ಎಂದು ಹೇಳಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಚುನಾಯಿತ ಪ್ರಧಾನಿಯನ್ನು ಭಯೋತ್ಪಾದಕ ಎಂದು ಕರೆಯುವ ಮೂಲಕ ಖರ್ಗೆ ಸಾರ್ವಜನಿಕ ನಡವಳಿಕೆಯ ಪ್ರತಿಯೊಂದು ಮಾನದಂಡವನ್ನೂ ಉಲ್ಲಂಘಿಸಿದ್ದಾರೆ ಮತ್ತು ರಾಷ್ಟ್ರಕ್ಕೆ ಅವಮಾನ ಮಾಡಿದ್ದಾರೆ. ಪ್ರಧಾನಿ ಮೋದಿ ಕಳೆದ 12 ವರ್ಷಗಳಿಂದ ಭಯೋತ್ಪಾದನೆಯನ್ನು ನಿಗ್ರಹಿಸಿದ್ದಾರೆ. ಖರ್ಗೆ ಅವರ ಹೇಳಿಕೆ ಅತ್ಯಂತ ಖಂಡನೀಯ. ಕಾಂಗ್ರೆಸ್ ಪ್ರತೀ ಬಾರಿ ಮೋದಿ ಅವರನ್ನು ನಿಂದಿಸಿದಾಗ ದೇಶದ ಜನರು ಅದಕ್ಕೆ ತಕ್ಕ ಉತ್ತರ ನೀಡಿದ್ದಾರೆ. ಈ ಬಾರಿಯೂ ಅದು ಮರುಕಳಿಸುತ್ತದೆ ಎಂದು ತಿಳಿಸಿದ್ದಾರೆ.

# ರಾಜ್ಯದ ಹಲವು ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿತ

**ಬೆಂಗಳೂರು,ಏ.22-**ಶ್ರೀರಂಗಪಟ್ಟಣ ತಾಲೂಕಿನಲ್ಲಿರುವ ಕನ್ನಂಬಾಡಿ ಕಟ್ಟೆ ಜಲಾಶಯದಲ್ಲಿ ನೀರಿನ ಮಟ್ಟ ಆತಂಕಕಾರಿ ಮಟ್ಟಕ್ಕೆ ಕುಸಿದಿದೆ. ಜಲಾಶಯದ ಇಂದಿನ ನೀರಿನ ಮಟ್ಟ 100 ಅಡಿಗಿಂತ ಕೆಳಕ್ಕೆ ಅಂದರೆ 99 ಅಡಿಗೆ ಕುಸಿದಿದ್ದು, ಮಳೆಗಾಲ ವಿಳಂಬವಾದರೆ ಕುಡಿಯುವ ನೀರಿಗಾಗಿ ದೊಡ್ಡ ಮಟ್ಟದ ಹಾಹಾಕಾರ ಎದುರಾಗುವ ಭೀತಿ ಆವರಿಸಿದೆ.

ಬೆಂಗಳೂರಿನ ಹಲವೆಡೆ ಈಗಾಗಲೇ ನೀರಿನ ಸಮಸ್ಯೆ ಶುರುವಾಗಿದ್ದು, ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ ಇಳಿಕೆಯಾಗಿರುವುದು ಇನ್ನಷ್ಟು ಸಮಸ್ಯೆಗೆ ಕಾರಣವಾಗಲಿದೆ. 124.80 ಅಡಿ ಗರಿಷ್ಠ ಮಟ್ಟ ಹೊಂದಿರುವ ಕೆಆರ್‌ಎಸ್ ಡ್ಯಾಂನಲ್ಲಿ ಸದ್ಯ ಕೇವಲ 22 ಟಿಎಂಸಿ ಮಾತ್ರ ನೀರು ಶೇಖರಣೆ ಇದೆ. ಇದರಲ್ಲಿ 7 ಟಿಎಂಸಿ ನೀರು ಡೆಡ್ ಸ್ಟೋರೇಜ್ ಆಗಿದ್ದು, ಬಳಕೆಗೆ ಲಭ್ಯವಿರುವುದು ಕೇವಲ 15 ಟಿಎಂಸಿ ಮಾತ್ರ. ಪ್ರಸ್ತುತ ಜಲಾಶಯಕ್ಕೆ 66 ಕ್ಯೂಸೆಕ್ ಒಳಹರಿವು ಇದ್ದರೆ, ಹೊರಹರಿವು 4,388 ಕ್ಯೂಸೆಕ್ ಇದೆ.

ಕಾವೇರಿ ನೀರನ್ನೇ ನಂಬಿಕೊಂಡಿರುವ ಸಿಲಿಕಾನ್ ಸಿಟಿ ಬೆಂಗಳೂರು ಸೇರಿದಂತೆ ಮೈಸೂರು, ಮಂಡ್ಯ ಮತ್ತು ಇತರ ನಗರಗಳಿಗೆ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ದಟ್ಟವಾಗಿದೆ.

ಸದ್ಯ ಲಭ್ಯವಿರುವ ನೀರನ್ನು ಕಟ್ಟು ಪದ್ಧತಿಯಲ್ಲಿ ಬೆಳೆಗೆ ನೀಡಬೇಕಿದೆ ಮತ್ತು ಕುಡಿಯಲು ಮೀಸಲಿಡಬೇಕಾದ ಅನಿವಾರ್ಯತೆ ಸರ್ಕಾರಕ್ಕೆ ಎದುರಾಗಿದೆ. ಜೂನ್ ಮೊದಲ ವಾರದಲ್ಲಿ ಮುಂಗಾರು ಮಳೆ ತಡವಾದರೆ ಅಥವಾ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದಿದ್ದರೆ ಕಾವೇರಿ ನೀರು ಅವಲಂಬಿತ ಜನರಿಗೆ ನೀರಿನ ಸಮಸ್ಯೆ ಕಟ್ಟಿಟ್ಟ ಬುತ್ತಿ ಎನ್ನಲಾಗುತ್ತಿದೆ.ಪ್ರಮುಖ ಜಲಾಶಯಗಳಲ್ಲಿ ನೀರಿನ ಪ್ರಮಾಣ ಕುಸಿತ ಕಂಡಿರುವುದು ಮುಂದೆ ಅನಾವೃಷ್ಟಿ ಪರಿಸ್ಥಿತಿ ಎದುರಾಗುತ್ತಾ ಎಂಬ ಆತಂಕ ಕಾಡುತ್ತಿದೆ. ಪ್ರಸ್ತುತ ಪ್ರಮುಖ ಜಲಾಶಯಗಳಲ್ಲಿ ಶೇ.36ಎಷ್ಟು ಮಾತ್ರ ನೀರು ಸಂಗ್ರಹವಿದೆ. ಸದ್ಯ ಪ್ರಮುಖ ಜಲಾಶಯಗಳಲ್ಲಿ 321 ಟಿಎಂಸಿ ನೀರಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಸುಮಾರು 330 ಟಿಎಂಸಿ ನೀರಿತ್ತು ಎಂದು ಕಂದಾಯ ಇಲಾಖೆ ಮಾಹಿತಿ ನೀಡಿದೆ.

ಜಲಸಂಪನ್ಮೂಲ ಇಲಾಖೆಯ ಅಂಕಿಅಂಶದ ಪ್ರಕಾರ ರಾಜ್ಯದ ಪ್ರಮುಖ ಜಲವಿದ್ಯುತ್ ಜಲಾಶಯಗಳಾದ ಲಿಂಗನಮಕ್ಕಿ, ಸೂಪ ಮತ್ತು ವರಾಹಿಯಲ್ಲಿ ಪ್ರಸ್ತುತ ಸುಮಾರು 107 ಟಿಎಂಸಿ ನೀರು ಸಂಗ್ರಹವಿದೆ. ಕಳೆದ ವರ್ಷ ಏಪ್ರಿಲ್ ಎರಡನೇ ವಾರದ ಅವಧಿಗೆ ಸುಮಾರು 124 ಟಿಎಂಸಿ ನೀರು ಲಭ್ಯವಿತ್ತು. ಈ ಮೂರು ಜಲಾಶಯಗಳ ಗರಿಷ್ಠ ಸಾಮರ್ಥ್ಯ 327.63 ಟಿಎಂಸಿ ಇದೆ. ಈ ಪೈಕಿ ಪ್ರಸ್ತುತ ಶೇಖರಣೆ ಇರುವುದು ಕೇವಲ ಶೇ.33ರಷ್ಟು ಮಾತ್ರ. ಲಿಂಗನಮಕ್ಕಿ ಜಲಾಶಯಕ್ಕೆ ಸುಮಾರು 50 ಕ್ಯುಸೆಕ್ ಒಳಹರಿವಿದೆ. ಉಳಿದ ಜಲಾಶಯಗಳಿಗೆ ಯಾವುದೇ ಒಳಹರಿವು ಇಲ್ಲ. ಕಾವೇರಿ ಕಣಿವೆಯಲ್ಲಿನ ಪ್ರಮುಖ ಜಲಾಶಯಗಳಾದ ಹಾರಂಗಿ, ಹೇಮಾವತಿ, ಕೆ.ಆರ್.ಎಸ್, ಕಬಿನಿಯಲ್ಲಿ ಪ್ರಸ್ತುತ ಒಟ್ಟು ಸುಮಾರು 57 ಟಿಎಂಸಿ ನೀರಿ ಶೇಖರಣೆ ಇದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಈ ಜಲಾಶಯಗಳಲ್ಲಿ ಒಟ್ಟು ಸುಮಾರು 58 ಟಿಎಂಸಿ ನೀರು ಸಂಗ್ರಹ ಇತ್ತು. ಈ ನಾಲ್ಕು ಜಲಾಶಯಗಳ ಗರಿಷ್ಠ ಸಾಮರ್ಥ್ಯ 114.57 ಟಿಎಂಸಿ ಇದೆ. ಇದರ ಪೈಕಿ ಸುಮಾರು ಶೇ.46 ಮಾತ್ರ ನೀರಿನ ಸಂಗ್ರಹವಿದೆ ಎಂದು ಇಲಾಖೆ ಅಂಕಿಅಂಶ ನೀಡಿದೆ.

# ಉಡುಪಿಗೆ ಡಿಜಿಪಿ ಸಲೀಂ ಭೇಟಿ: ಕೋಮು ಸೌಹಾರ್ದ ಕಾಪಾಡಲು ಕೈಗೊಂಡ ಕ್ರಮಗಳಿಗೆ ಮೆಚ್ಚುಗೆ

**ಉಡುಪಿ,ಏ.22-**ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಹಾಗೂ ಮಹಾನಿರೀಕ್ಷಕ ಡಾ.ಎಂ.ಎ. ಸಲೀಂ ಅವರು ಬುಧವಾರ ಉಡುಪಿಗೆ ಭೇಟಿ ನೀಡಿದ್ದು, ಕರಾವಳಿ ಕಾವಲು ಪಡೆ, ಮಲ್ಪೆ ಹಾಗೂ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದಾರೆ.

ಮಲ್ಪೆಯ ಕರಾವಳಿ ಕಾವಲು ಪಡೆಯ ಪರಿವೀಕ್ಷಣೆಯ ವೇಳೆ ಪೊಲೀಸ್ ಮಹಾನಿರೀಕ್ಷಕರು, ಪಶ್ಚಿಮ ವಲಯ ಮಂಗಳೂರು ಹಾಗೂ ಕರಾವಳಿ ಕಾವಲು ಪಡೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಕೋಮು ಸೌಹಾರ್ದ ಕಾಪಾಡಲು ಕೈಗೊಂಡ ಕ್ರಮಗಳನ್ನು ಡಿಜಿಪಿ ಶ್ಲಾಘಿಸಿ, ಅದೇ ರೀತಿಯಲ್ಲಿ ಮುಂದುವರಿಸಬೇಕು ಎಂದು ಸೂಚಿಸಿದರು. ರೌಡಿ ಚಟುವಟಿಕೆಗಳು ಹಾಗೂ ಕಾನೂನುಬಾಹಿರ ಕೃತ್ಯಗಳಲ್ಲಿ ತೊಡಗಿರುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದರು.

ಸೊತ್ತು ಕಳವು ಪ್ರಕರಣಗಳನ್ನು ಪತ್ತೆ




ಹಚ್ಚುವುದರ ಜೊತೆಗೆ ತಡೆಗಟ್ಟುವ ಕ್ರಮಗಳನ್ನು ಬಲಪಡಿಸಬೇಕು.

ಅಪರಾಧ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಗೊಳಿಸುವಂತೆ ಅಧಿಕಾರಿ ಗಳಿಗೆ ಸೂಚಿಸಿದರು. ಆಸರೆ ಕಾರ್ಯಕ್ರಮವನ್ನು ತಾವು ಉಡುಪಿ ಜಿಲ್ಲಾ ಎಸ್‌ಪಿ ಆಗಿದ್ದ ಸಂದರ್ಭದಲ್ಲಿ ಪರಿಚಯಿಸಿದ್ದು, ಈಗ ರಾಜ್ಯಾದ್ಯಂತ ಅನುಷ್ಠಾನಗೊಳ್ಳುತ್ತಿದೆ ಎಂದರು.

ಉಡುಪಿ ಜಿಲ್ಲೆಯಲ್ಲಿ ಈ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಸಮುದಾಯ ಪೊಲೀಸ್ ಕಾರ್ಯಕ್ರಮಗಳಾದ ಮನೆ ಮನೆಗೆ ಪೊಲೀಸ್, ಸ್ಪಂದನ ಹಾಗೂ ಮಕ್ಕಳ ಸಹಾಯವಾಣಿ ಸೇವೆಗಳನ್ನು ಮತ್ತಷ್ಟು ಬಲಪಡಿಸಲು ತಿಳಿಸಿದರು.

ಉಡುಪಿ ಜಿಲ್ಲೆಯ ನಾಗರಿಕರು ಸುಶಿಕ್ಷಿತರು ಹಾಗೂ ಶಾಂತಿಪ್ರಿಯರಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವಂತೆ, ಪೊಲೀಸ್ ಇಲಾಖೆಯೂ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಮಾದರಿಯಾಗುವಂತೆ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ನಂತರ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪಶ್ಚಿಮ ವಲಯ ಪೊಲೀಸ್ ಮಹಾನಿರೀಕ್ಷಕರು ಅಮಿತ್ ಸಿಂಗ್, ಉಡುಪಿ ಜಿಲ್ಲಾ ಪೊಲೀಸ್ ಅಧೀಕ್ಷಕ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಸೇರಿದಂತೆ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

# ಬಹುತೇಕ ಸರ್ಕಾರಿ ನೌಕರರಿಗೆ ರಾಜ್ಯ ಸರ್ಕಾರ ಸಂಬಳ ಕೊಟ್ಟಿಲ್ಲ-ವಿಜಯೇಂದ್ರ


**ಬೆಂಗಳೂರು,ಏ.22-**ಸಿದ್ದರಾಮಯ್ಯನವರ ಆರ್ಥಿಕ ನೀತಿ ವೈಫಲ್ಯದ ಹಿನ್ನೆಲೆಯಲ್ಲಿ ಏಪ್ರಿಲ್ ತಿಂಗಳ 22ರವರೆಗೆ ಬಹುತೇಕ ಸರ್ಕಾರಿ ನೌಕರರಿಗೆ ರಾಜ್ಯ ಸರ್ಕಾರ ಸಂಬಳವನ್ನೇ ಕೊಟ್ಟಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದರು.

ಇಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರದ ದುರಾಡಳಿತ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆರ್ಥಿಕ ನೀತಿಗಳ ವೈಫಲ್ಯ ಹಾಗೂ ಆಡಳಿತದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಇದರ ಪರಿಣಾಮವಾಗಿ ರಾಜ್ಯದ ಸುಮಾರು 5 ಲಕ್ಷ ಸರ್ಕಾರಿ ನೌಕರರ ಪೈಕಿ ಬಹುತೇಕ ನೌಕರರಿಗೆ ಏಪ್ರಿಲ್ ತಿಂಗಳ 22ರವರೆಗೆ ಸರ್ಕಾರ ಸಂಬಳವನ್ನೇ ನೀಡಿಲ್ಲ ಎಂದು ದೂರಿದ್ದಾರೆ.

ಕಳೆದ ವರ್ಷ ಎರಡು ತಿಂಗಳ ಅವಧಿಗೆ ಗೃಹಲಕ್ಷ್ಮಿ ಹಣವನ್ನೇ ನುಂಗಿ ಹಾಕಿದ ಸರ್ಕಾರ, ಈ ವರ್ಷ ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಚುನಾವಣೆಯ ಕಾರಣಕ್ಕಾಗಿ ಮಾರ್ಚ್ ಅಂತ್ಯಕ್ಕೆ

ಖಜಾನೆಯಲ್ಲಿದ್ದ ಹಣವನ್ನು ಗೃಹಲಕ್ಷ್ಮಿ ಫಲಾನುಭವಿಗಳಿಗೆ ಹಂಚಿದೆ. ಪರಿಣಾಮ, ಸರ್ಕಾರದ 5 ಲಕ್ಷ ಸರ್ಕಾರಿ ನೌಕರರಿಗೆ ತಿಂಗಳು ಕಳೆಯುತ್ತಾ ಬಂದರೂ ಸಂಬಳ ಕೊಡಲು ಸರ್ಕಾರಕ್ಕೆ ಸಾಧ್ಯವಾಗಿಲ್ಲ ಎಂದು ಆರೋಪಿಸಿದ್ದಾರೆ.

ಮುಖ್ಯಮಂತ್ರಿಗಳ ಬದಲಾವಣೆ, ಸಂಪುಟ ಪುನರ್‌ರಚನೆ, ಮುಸ್ಲಿಮರ ತುಷ್ಟೀಕರಣ ಹೀಗೆ ಹಲವು ಆಂತರಿಕ



ಬಿಕ್ಕಟ್ಟಿನಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವೈಯಕ್ತಿಕ ಪ್ರತಿಷ್ಠೆಯಲ್ಲಿ ಮುಳುಗಿ ಹೋಗಿದ್ದಾರೆ. ಇದರ ನೇರ ಪರಿಣಾಮ ರಾಜ್ಯದ ಜನರ ಮೇಲಾಗುತ್ತಿದೆ ಎಂದು ಟೀಕಿಸಿದ್ದಾರೆ.

ಸರ್ಕಾರಿ ನೌಕರರಿಗೆ ಸಂಬಳವನ್ನೇ ಕೊಡಲು ಸಾಧ್ಯವಾಗದ ಈ ಸರ್ಕಾರ, ಈ ವರ್ಷ ಬಿರು ಬೇಸಿಗೆ ಹಾಗೂ ಬರದ ಛಾಯೆಯಲ್ಲಿ

ಈಗಾಗಲೇ ಬಸವಳಿದು ಹೋಗಿರುವ ರಾಜ್ಯದ ಜನರನ್ನು ದೇವರೇ ಕಾಪಾಡಬೇಕು. ಪ್ರತಿಪಕ್ಷವಾಗಿ ಬಿಜೆಪಿ ಸರ್ಕಾರವನ್ನು ಬಡಿದೆಬ್ಬಿಸಿ ಕುಡಿಯುವ ನೀರಿಗೂ ಪರಿತಪಿಸುತ್ತಿರುವ ಜನ, ಜಾನುವಾರು ನೆರವಿಗೆ ಮುಂದಾಗುವಂತೆ ಹೋರಾಟ ನಡೆಸಲು ಬದ್ಧವಾಗಿದೆ ಎಂದಿದ್ದಾರೆ.

# ಪಹಲ್ಗಾಮ್ ದಾಳಿಯಲ್ಲಿ ಮಗ ತೀರಿಹೋಗಿ 1 ವರ್ಷ, ಅಗಲಿಕೆ ನೋವು ಇನ್ನೂ ಇದೆ: ಮಂಜುನಾಥ್ ತಾಯಿ

**ಶಿವಮೊಗ್ಗ,ಏ.22-**ನನ್ನ ಮಗ ಪಹಲ್ಗಾಮ್ ಉಗ್ರರ ದಾಳಿಯಲ್ಲಿ ಮೃತನಾಗಿ 1 ವರ್ಷವಾಗಿದೆ. ಮಗನ ಅಗಲಿಕೆಯ ನೋವು ನಮ್ಮಲ್ಲಿ ಇನ್ನೂ ಇದೆ ಎಂದು ಅತ್ಯಂತ ದುಃಖದಲ್ಲಿ ಮಂಜುನಾಥ ರಾವ್ ಅವರ ತಾಯಿ ಸುಮತಿ ರಾವ್ ಭಾವುಕರಾದರು.




ವಿಜಯನಗರದ ತಮ್ಮ ಮನೆಯಲ್ಲಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಏನೂ ಮಾಡುವುದು ಎಲ್ಲರ ಬಳಿ ನಮ್ಮ ದುಃಖ ತೋರಿಸಲು ಆಗಲ್ಲ. ಅವನ ಸಮಯ ಆಯಿತು ಹೋದ. ಈಗ ನನ್ನ ಸಮಯಕ್ಕೆ ಕಾಯುತ್ತಿದ್ದೇನೆ. ಸೊಸೆ ಈಗ ಸಂಪೂರ್ಣ ಡ್ಯೂಟಿ ಕಡೆ ಇದ್ದಾರೆ. ಮೊಮ್ಮಗ ಬೆಂಗಳೂರಿನಲ್ಲಿ ಬಿ.ಕಾಂ ಓದುತ್ತಿದ್ದಾನೆ ಎಂದು ಹೇಳಿದರು.

ಆಪರೇಷನ್ ಸಿಂಧೂರ್ ನಡೆಸಿದಾಗ ಒಂದು ರೀತಿ ಖುಷಿ ಆಯಿತು. ನಮ್ಮ ದೇಶದ ಮೇಲೆ ದಾಳಿ ನಡೆಸಿದಾಗ ಸುಮ್ಮನಿರದೆ, ತಕ್ಕ ಉತ್ತರ ನೀಡಿದ್ದಾರೆಂದು ಸಮಾಧಾನವಾಯಿತು್. ಮಗನ ಸ್ನೇಹಿತರು, ಬಂಧುಗಳು ಆಗಾಗ್ಗೆ ಬಂದು ಹೋಗುತ್ತಿರುತ್ತಾರೆ. 10 ದಿನದ ಹಿಂದೆ ಮಗನ ವರ್ಷದ ಕಾರ್ಯ ಮಾಡಿ ಮುಗಿಸಿದೆವು. ಮಗನನ್ನು ಕಳೆದುಕೊಂಡ ನೋವು ನಮ್ಮಲ್ಲಿ ಈಗಲೂ ಇದೆ ಎಂದು ತಾಯಿ ಸುಮತಿ ದುಃಖಿತರಾದರು.

ಕುಟುಂಬ ಸಮೇತ ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದ ಮಂಜುನಾಥ್ ರಾವ್ ಉಗ್ರರ ಗುಂಡಿಗೆ ಬಲಿಯಾಗಿದ್ದರು. ಮಂಜುನಾಥ್ ಅವರನ್ನು ಪಹಲ್ಗಾಮ್‌ನಲ್ಲಿ ಅವರ ಪತ್ನಿ, ಮತ್ತು ಮಗನ ಎದುರೇ ತಲೆಗೆ ಗುಂಡಿಟ್ಟು ಭಯೋತ್ಪಾದಕರು ಹತ್ಯೆ ಮಾಡಿದ್ದರು. ಅವರ ಪತಿಯ ಅಂತ್ಯಕ್ರಿಯೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ್ದ ಮಂಜುನಾಥ್ ಅವರ ಅವರ ಪತ್ನಿ ಪಲ್ಲವಿ ರಾವ್ ಅವರು, ನಾವು ಒಬ್ಬಂಟಿ ಅಲ್ಲ, ಇಡೀ ದೇಶವೇ ನಮ್ಮ ಕುಟುಂಬದ ಜೊತೆ ಇದೆ ಎಂದಿದ್ದರು. ಉಗ್ರರನ್ನು ಮಟ್ಟಹಾಕಬೇಕು ಎಂದು ಅವರು ಆಗ್ರಹಿಸಿದ್ದರು. ಈ ಘಟನೆಯಲ್ಲಿ ಇಬ್ಬರು ಕನ್ನಡಿಗರು ಪ್ರಾಣತೆತ್ತಿದ್ದರು. ಶಿವಮೊಗ್ಗದ ಮಂಜುನಾಥ್ ರಾವ್ ಮತ್ತು ಬೆಂಗಳೂರಿನ ಮತ್ತಿಕೆರೆಯ ಭರತ್ ಭೂಷಣ್ ಸಹ ಉಗ್ರರ ಅಟ್ಟಹಾಸಕ್ಕೆ ಬಲಿಯಾಗಿದ್ದರು. ಅವರಿಬ್ಬರ ಪಾರ್ಥಿವ ಶರೀರಗಳನ್ನು ಎಪ್ರಿಲ್ 24'ರಂದು ಕಾರ್ಗೋ ವಿಮಾನನದ ಮೂಲಕ ಬೆಂಗಳೂರಿಗೆ ತರಲಾಗಿತ್ತು.ಮಗನ ಸಾವಿನಿಂದ ಆಘಾತ: ಕಾಶ್ಮೀರ ಪ್ರವಾಸ ಮುಗಿಸಿ ಮಗ ಇನ್ನೇನು ಮನೆಗೆ ಬರ್ತಾನೆ ಅಂದುಕೊಂಡಿದ್ದೆವು. ಆದ್ರೆ ಆತನ ಮೃತದೇಹ ಬಂದಿದೆ ಎಂದು ಭರತ್ ಭೂಷಣ್ ಅವರ ತಾಯಿ ಕಣ್ಣೀರಿಟ್ಟಿದ್ದರು. ಭರತ್ ಭೂಷಣ್ ತಾಯಿ ಮೃತದೇಹದ ಮುಂದೆ ಕಣ್ಣೀರಿಟ್ಟ ದೃಶ್ಯ ಮನಕಲಕುವಂತಿತ್ತು. ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿತ್ತು.ಎಪ್ರಿಲ್ 22, 2025 ರಂದು ನಡೆದ ಪಹಲ್ಗಾಮ್ ಉಗ್ರರ ದಾಳಿಯಲ್ಲಿ ಒಟ್ಟು 26 ಜನರು ಹತ್ಯೆಗೀಡಾಗಿದ್ದರು. ಒಂದು ದಿನದ ಬಳಿಕ ಅವರೆಲ್ಲರ ಗುರುತು ಪತ್ತೆ ಹಚ್ಚಲಾಗಿತ್ತು. ಮೃತರಲ್ಲಿ 12 ವಿವಿಧ ರಾಜ್ಯಗಳಿಂದ ಕಾಶ್ಮೀರ ಪ್ರವಾಸಕ್ಕೆ ತೆರಳಿದವರಾಗಿದ್ದರು. ಈ ಪೈಕಿ ಬಹುತೇಕರು ಮಹಾರಾಷ್ಟ್ರ ರಾಜ್ಯಕ್ಕೆ ಸೇರಿದವರಾಗಿದ್ದರು.

ಹತ್ಯೆಗೀಡಾದವರಲ್ಲಿ ಐಎಎಫ್ ಕಾರ್ಪೋರಲ್, ನೌಕಾಪಡೆ ಮತ್ತು ಅಬಕಾರಿ ಅಧಿಕಾರಿ ಮತ್ತು ಕರ್ನಾಟಕದ ಉದ್ಯಮಿ ಸೇರಿದ್ದರು.ಮೃತಪಟ್ಟವರಲ್ಲಿ ಮಹಾರಾಷ್ಟ್ರ, ಗುಜರಾತ್, ಕರ್ನಾಟಕ, ಆಂಧ್ರ ಪ್ರದೇಶ, ಕೇರಳ, ಹರಿಯಾಣ, ಒಡಿಶಾ, ಉತ್ತರ ಪ್ರದೇಶ, ಉತ್ತರಾಖಂಡ, ಅರುಣಾಚಲ ಪ್ರದೇಶ, ಬಿಹಾರ, ಮಧ್ಯ ಪ್ರದೇಶ ಮತ್ತು ಓರ್ವ ನೇಪಾಳಿ ಪ್ರಜೆ ಸೇರಿದ್ದರು. ಓರ್ವ ಪಹಲ್ಗಾಮ್‌ನ ಸ್ಥಳೀಯ ಸೈಯದ್ ಆದಿಲ್ ಹುಸೇನ್ ಷಾ ಎಂಬ ವ್ಯಕ್ತಿಯೂ ಹುತಾತ್ಮರಾಗಿದ್ದರು. ಈ ವ್ಯಕ್ತಿ ಉಗ್ರನೋರ್ವನಿಂದ ಬಂದೂಕು ಕಸಿದುಕೊಂಡು ಕೆಲ ಪ್ರವಾಸಿಗರ ಪ್ರಾಣ ರಕ್ಷಿಸುವಲ್ಲಿ ಯಶಸ್ವಿಯಾಗಿದ್ದರು.

ಆದ್ರೆ ದುರಾದೃಷ್ಟವಶಾತ್ ಉಗ್ರರ ಗುಂಡಿಗೆ ಬಲಿಯಾಗಿದ್ದರು. ಪ್ರತ್ಯಕ್ಷದರ್ಶಿಗಳ ಹೇಳಿಕೆಗಳ ಪ್ರಕಾರ, ಸಾವನ್ನಪ್ಪಿದವರೆಲ್ಲರೂ ಪುರುಷರಾಗಿದ್ದು, ಭಯೋತ್ಪಾದಕರು ಒಬ್ಬೊಬ್ಬರನ್ನೇ ಆಯ್ಕೆ ಮಾಡಿ ಗುಂಡು ಹಾರಿಸಿ, ಕೊಂದಿದ್ದರು. ಎಪ್ರಿಲ್ 22, 2025ರ ಮಧ್ಯಾಹ್ನ 2.30ರ ಸುಮಾರಿಗೆ, ದಕ್ಷಿಣ ಕಾಶ್ಮೀರದ ಪಹಲ್ಗಾಮ್‌ನಿಂದ 6 ಕಿಲೋಮೀಟರ್ ದೂರದಲ್ಲಿರುವ ಬೈಸರನ್ ಎಂಬಲ್ಲಿ ಭಯೋತ್ಪಾದಕರು ಪ್ರವಾಸಿಗರ ಮೇಲೆ ಈ ರೀತಿ ಅಟ್ಟಹಾಸ ಮೆರೆದಿದ್ದರು.

# ವಿಳಂಬವಾಗಿ ಮೇಲ್ಮನವಿ ಸಲ್ಲಿಸಿದರೆ ಪರಿಗಣಿಸಲಾಗದು ಎಂದ ಹೈಕೋರ್ಟ್-ಮುಡಾಗೆ ಹಿನ್ನಡೆ

**ಬೆಂಗಳೂರು,ಏ.22-**ಶಾಸನಬದ್ಧ ಪ್ರಾಧಿಕಾರವೊಂದು ಸಾಕಷ್ಟು ವಿಳಂಬವಾಗಿ ಮೇಲ್ಮನವಿ ಸಲ್ಲಿಸಿದೆ ಎಂಬ ಒಂದೇ ಕಾರಣಕ್ಕೆ ಕಾನೂನು ಮಿತಿಗಳನ್ನು ಮೀರಿ ಕಾರ್ಯನಿರ್ವಹಿಸಲಾಗದು ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಭೂಸ್ವಾಧೀನಪ್ರಕ್ರಿಯೆ ಅಧಿಸೂಚನೆ ರದ್ದುಪಡಿಸಿದ್ದ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ) ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿದೆ.




ಧರ್ಮಸ್ಥಳ ಗ್ರಾಮದ ಡಾ.ಡಿ.ವೀರೇಂದ್ರ ಹೆಗ್ಗಡೆ ಸೇರಿ ಮತ್ತಿತರರಿಗೆ ಸೇರಿದ್ದ ಜಮೀನಿನ ಸ್ವಾಧೀನಕ್ಕಾಗಿ ಹೊರಡಿಸಿದ್ದ ಪ್ರಾಥಮಿಕ ಮತ್ತು ಅಂತಿಮ ಅಧಿಸೂಚನೆ ರದ್ದುಪಡಿಸಿದ್ದ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಮುಡಾ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನು ಶಿವರಾಮನ್ ಮತ್ತು ನ್ಯಾ.ವಿಜಯಕುಮಾರ್ ಎ.ಪಾಟೀಲ್ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿತು.

ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಸುಮಾರು 460ಕ್ಕೂ ಹೆಚ್ಚು ದಿನಗಳ ವಿಳಂಬವಾಗಿ ಮುಡಾ ಮೇಲ್ಮನವಿ ಸಲ್ಲಿಸಿದೆ. ವಿಳಂಬಕ್ಕೆ ಮುಡಾ ನೀಡಿದ ಕಾರಣಗಳು ಅಸ್ಪಷ್ಟವಾಗಿದ್ದು, ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಕಾನೂನು ಮಿತಿಗಳ ಕಾಯಿದೆ (ಲಿಮಿಟೇಷನ್ ಆ್ಯಕ್ಟ್)ನ ಉದ್ದೇಶವು ದಾವೆಗಳಿಗೆ ಒಂದು ಅಂತಿಮ ರೂಪ ನೀಡುವುದಾಗಿದೆ. ಅಧಿಕಾರಿಗಳ ವಿಳಂಬ ಮತ್ತು ನಿರ್ಲಕ್ಷ್ಯದ ಧೋರಣೆಯನ್ನು ನ್ಯಾಯಾಲಯವು ಒಪ್ಪಲು ಸಾಧ್ಯವಿಲ್ಲ. ಸೂಕ್ತ ಕಾರಣಗಳಿಲ್ಲದೆ ಇಂತಹ ವಿಳಂಬವನ್ನು ಪುರಸ್ಕರಿಸುವುದು ಸಾರ್ವಜನಿಕ ನೀತಿಗೆ ವಿರುದ್ಧ ಎಂದು ತಿಳಿಸಿ ಮೇಲ್ಮನವಿ ಅರ್ಜಿಯನ್ನು ವಜಾಗೊಳಿಸಿದೆ.

ಅಲ್ಲದೆ, ವಿಳಂಬಕ್ಕೆ ಸಂಬಂಧಿಸಿದಂತೆ ಮುಡಾ ಆಯುಕ್ತರು ಸಲ್ಲಿಸಿರುವ ಪ್ರಮಾಣಪತ್ರ, ಅತ್ಯಂತ ಅಸ್ಪಷ್ಟವಾಗಿದೆ. ಈ ವಿಳಂಬವನ್ನು ಪರಿಗಣಿಸುವುದಕ್ಕೆ ಸೂಕ್ತ ವಿವರಣೆ ನೀಡಿಲ್ಲ. ಇಂತಹ ವಿಳಂಬವನ್ನು ಪರಿಗಣಿಸಿದಲ್ಲಿ ಸತ್ತಂತಿರುವ ಮುಡಾದ ಹಕ್ಕನ್ನು ಮತ್ತೆ ಉಳಿಸಿದಂತಾಗುತ್ತದೆ.

ತಮ್ಮ ಹಕ್ಕಿನ ಬಗ್ಗೆ ಶ್ರದ್ಧೆ ಇಲ್ಲದವರ ಪರ ಆದೇಶ ನೀಡಿದಂತಾಗುತ್ತದೆ. ಜೊತೆಗೆ, ಲಿಮಿಟೇಷನ್ ಕಾಯಿದೆಯ ಉದ್ದೇಶ ಮತ್ತು ಸಾರ್ವಜನಿಕ ನೀತಿಗೆ ವಿರುದ್ಧವಾಗಿ ನಡೆದಂತಾಗಲಿದ್ದು, ಪ್ರತಿವಾದಿಗಳಿಗೆ ದೊಡ್ಡ ಅನ್ಯಾಯವನ್ನುಂಟು ಮಾಡಿದಂತಾಗಲಿದೆ ಎಂದು ಪೀಠ ಹೇಳಿದೆ.

ಮುಡಾ ಆಯುಕ್ತರು ಸಲ್ಲಿಸಿರುವ ಪ್ರಮಾಣಪತ್ರದಲ್ಲಿ ಸಮಂಜಸವಾದ ವಿವರಣೆ ಇಲ್ಲವಾಗಿದ್ದು, ಅಲ್ಲಿನ ಅಧಿಕಾರಿಗಳ ನಿರ್ಲಕ್ಷ್ಯ ಮನೋಭಾವದಿಂದ ವಿಳಂಬಕ್ಕೆ ಕಾರಣವಾಗಿದೆ ಎಂಬ ಅಂಶ ಗೊತ್ತಾಗುತ್ತದೆ. ಆದ್ದರಿಂದ ಮೇಲ್ಮನವಿ ಅರ್ಜಿ ವಜಾಗೊಳಿಸುತ್ತಿರುವುದಾಗಿ ಪೀಠ ತಿಳಿಸಿತು.

ಪ್ರಕರಣದ ಹಿನ್ನೆಲೆ: ಮೈಸೂರಿನ ಆಲನಹಳ್ಳಿ ಗ್ರಾಮದಲ್ಲಿ ಧರ್ಮಸ್ಥಳದ ಡಾ.ಡಿ.ವೀರೇಂದ್ರ ಹೆಗ್ಗಡೆ ಸೇರಿದಂತೆ ಮತ್ತಿತರರಿಗೆ ಸೇರಿದ್ದ ವಿವಿಧ ಸರ್ವೇ ನಂಬರ್‌ಗಳ ಜಮೀನುಗಳನ್ನು ಆಲನಹಳ್ಳಿ 2ನೇ ಹಂತದ ಬಡಾವಣೆ ನಿರ್ಮಾಣಕ್ಕಾಗಿ ಭೂಸ್ವಾಧೀನಪಡಿಸಿಕೊಳ್ಳಲು 1992ರ ಜೂನ್ 25ರಂದು ಪ್ರಾಥಮಿಕ ಮತ್ತು 1996ರ ಮಾರ್ಚ್ 18ರಂದು ಮುಡಾ ಅಂತಿಮ ಅಧಿಸೂಚನೆ ಹೊರಡಿಸಿತ್ತು.

ಇದನ್ನು ಪ್ರಶ್ನಿಸಿ ಭೂಮಾಲೀಕರಾದ ಡಾ.ಡಿ.ವೀರೇಂದ್ರ ಹೆಗ್ಗಡೆ ಮತ್ತು ಸಿ.ನಾಗರಾಜು ಎಂಬವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಏಕಸದಸ್ಯ ಪೀಠ, ಭೂ ಸ್ವಾಧೀನಕ್ಕೆ ಹೊರಡಿಸಿದ್ದ

ಅಧಿಸೂಚನೆಗಳನ್ನು 2022ರ ಆಗಸ್ಟ್ 1ರಂದು ರದ್ದುಪಡಿಸಿ ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಮುಡಾ, ದ್ವಿಸದಸ್ಯ ಪೀಠಕ್ಕೆ ಮೇಲ್ಮನವಿ ಅರ್ಜಿ ಸಲ್ಲಿಸಿತ್ತು.

# ಕೆರೆಯಲ್ಲಿ ಈಜಲು ಹೋದ ಬಾಲಕ ಸಾವು
## ಒಂದೇ ವಾರದಲ್ಲಿ ಚಿಕ್ಕಮಗಳೂರಿನಲ್ಲಿ ನಾಲ್ವರು ಜಲ ಸಮಾಧಿ

**ಚಿಕ್ಕಮಗಳೂರು,ಏ.22-**ಅಯ್ಯನಕೆರೆಯಲ್ಲಿ ಈಜಲು ತೆರಳಿದ್ದ 13 ವರ್ಷದ ಬಾಲಕ ನೀರಿನಲ್ಲಿ ಮುಳುಗಿ ದಾರುಣವಾಗಿ ಸಾವನ್ನಪ್ಪಿದ್ದಾನೆ.




ಚಿಕ್ಕಮಗಳೂರು ನಗರದ ದಂಟರಮಕ್ಕಿ ನಿವಾಸಿ ಪೃಥ್ವಿರಾಜ್ ಮೃತಪಟ್ಟ ದುರ್ದೈವಿ. ಬಾಲಕ ತನ್ನ ದೊಡ್ಡಮ್ಮ ಹಾಗೂ ಮೂರು ಜನ ಸ್ನೇಹಿತರೊಂದಿಗೆ ಕೆರೆಗೆ ಈಜಲು ಹೋಗಿದ್ದ ವೇಳೆ ಅವಘಡ ಸಂಭವಿಸಿದೆ. ಸ್ನೇಹಿತರೊಂದಿಗೆ ಸೇರಿ ಈಜುತ್ತಿದ್ದ ಪೃಥ್ವಿರಾಜ್ ಆಕಸ್ಮಿಕವಾಗಿ ನೀರಿನ ಸೆಳೆತಕ್ಕೆ ಸಿಲುಕಿ ಮುಳುಗಿದ್ದಾನೆ. ಈ ವೇಳೆ ಉಳಿದವರು ರಕ್ಷಿಸಲು ಪ್ರಯತ್ನಿಸಿದರೂ ಫಲಕಾರಿಯಾಗಿಲ್ಲ. ಘಟನೆಯ ಬಗ್ಗೆ ಮಾಹಿತಿ ಲಭಿಸುತ್ತಿದ್ದಂತೆಯೇ ಸಖರಾಯಪಟ್ಟಣ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು.

ಈ ಕುರಿತು ಕಡೂರು ತಾಲೂಕಿನ ಸಖರಾಯ ಪಟ್ಟಣ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರತಿಕ್ರಿಯೆ ನೀಡಿದ್ದು, ನೀರಿನಲ್ಲಿ ಮುಳುಗಿ ಸಾವನಪ್ಪಿದ ಪೃಥ್ವಿರಾಜ್ ಚಿಕ್ಕಮಗಳೂರು ನಗರದ ದಂಟರ ಮಕ್ಕಿ ನಿವಾಸಿಯಾಗಿದ್ದಾನೆ. ಅವರ ದೊಡ್ಡಮ್ಮ ಸೇರಿ, ಆತನ ಇಬ್ಬರು ಸ್ನೇಹಿತರ ಜೊತೆ ಬಂದಂತಹ ಸಂದರ್ಭದಲ್ಲಿ ಇಬ್ಬರು ಸ್ನೇಹಿತರ ಜೊತೆ ಸೇರಿ ನೀರಿನಲ್ಲಿ ಈಜಾಡಲು ಹೋಗಿದ್ದಾನೆ. ಈ ವೇಳೆ ಮೂರು ಜನ ನೀರಿನಲ್ಲಿ ಮುಳುಗುತ್ತಿದ್ದಂತೆ ಅಲ್ಲೇ ಇದ್ದಂತ ಸ್ಥಳೀಯರು ನೀರಿಗೆ ಜಿಗಿದು ಇಬ್ಬರನ್ನು ಪಾರು ಮಾಡಿದ್ದಾರೆ. ಅದರಲ್ಲಿ ಪೃಥ್ವಿರಾಜ್ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದು, ಈ ಕುರಿತು ಸಖರಾಯಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ದೇಹವನ್ನು ಜಿಲ್ಲಾ ಆಸ್ಪತ್ರೆಗೆ ರವಾನೆ ಮಾಡಲಾಗಿದ್ದು, ತನಿಖೆಯನ್ನು ಮುಂದುವರಿಸಲಾಗಿದೆ.

ಈ ವಾರದಲ್ಲಿ ನೀರಿನಲ್ಲಿ ಮುಳುಗಿ ನಾಲ್ಕು ಜನ ಸಾವನ್ನಪ್ಪಿದ್ದಾರೆ. ಎನ್‌ಆರ್‌ಪುರ ತಾಲೂಕಿನ ಸಿದ್ದರಾಮಯ್ಯ ಸೇತುವೆ ಕೆಳ ಭಾಗದಲ್ಲಿ ಓರ್ವ ಯುವಕ ಇದೇ ರೀತಿ ನೀರಿನಲ್ಲಿ ಮುಳುಗಿ ಸಾವನಪ್ಪಿದ್ದನು. ಕಳೆದ ನಾಲ್ಕು ದಿನಗಳ ಹಿಂದೆ ಬನ್ನೂರು ಸಮೀಪ ಕೃಷಿ ಹೊಂಡದಲ್ಲಿ ಮುಳುಗಿ ಇಬ್ಬರು ಸಾವನ್ನಪ್ಪಿದ್ದರು.

ಪುತ್ರನನ್ನು ರಕ್ಷಿಸಲು ಹೋದ ತಾಯಿಯೇ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಸಂಕೇಶ್ವರ ಪಟ್ಟಣದ ಹೊರವಲಯದಲ್ಲಿ ಸಂಭವಿಸಿದೆ.

ನಿನ್ನೆ ಸಂಜೆ ತಾಯಿ ಮತ್ತು ಮಗ ಸಂಕೇಶ್ವರ ಪಟ್ಟಣದಲ್ಲಿರುವ ಶಂಕರಲಿಂಗ ದೇವಸ್ಥಾನಕ್ಕೆ ಭೇಟಿ ನೀಡಿದ್ದರು. ಬಳಿಕ ದೇವಸ್ಥಾನದ ಪಕ್ಕದಲ್ಲೇ ಹರಿಯುವ ಹಿರಣ್ಯಕೇಶಿ ನದಿಯ ಬಳಿ ತೆರಳಿದ್ದರು.

ಈ ವೇಳೆ ಬಾಲಕ ಈಜಲು ತೆರಳಿದ್ದು, ಮುಳುಗಲು ಪ್ರಾರಂಭಿಸಿದ್ದ. ಇದ ಕಂಡ ತಾಯಿ ಮಗನ ರಕ್ಷಣೆಗಾಗಿ ತಾಯಿ ನದಿಗೆ ಹಾರಿದ್ದರು. ಆದರೆ ಈಜು

ಬಾರದ ಕಾರಣ ಇಬ್ಬರೂ ನದಿಯಲ್ಲಿ ಮುಳುಗಿದ್ದಾರೆ. ಇದರಲ್ಲಿ ತಾಯಿಯ ಶವ ಸಿಕ್ಕಿದ್ದು, ಮಗನಿಗಾಗಿ ಶೋಧ ಮುಂದುವರೆದಿದೆ.

# ಮೈಸೂರಿನಲ್ಲಿ ಪ್ರಾದೇಶಿಕ ಉಚಿತ ಉದ್ಯೋಗ ಮೇಳ: 2000ಕ್ಕೂ ಹೆಚ್ಚು ಉದ್ಯೋಗಾವಕಾಶ, ನೋಂದಣಿ ಮಾಹಿತಿ ಇಲ್ಲಿದೆ

**ಮೈಸೂರು,ಏ.22-**ಮೈಸೂರಿನ ಯಂಗ್ ಇಂಡಿಯಾ ಸಂಸ್ಥೆ ವತಿಯಿಂದ ನಗರದ ಎಸ್‌ಜೆಸಿಯಲ್ಲಿ ಎಪ್ರಿಲ್ 25 ರಂದು ಉಚಿತ ಯುವ ಜಾಬ್ ಫೇರ್ ಆಯೋಜನೆ ಮಾಡಲಾಗಿದೆ. ಈ ಭಾಗದ ಪ್ರಾದೇಶಿಕ ಪ್ರತಿಭೆಗಳು ಹೆಸರನ್ನು ನೋಂದಾಯಿಸಿಕೊಳ್ಳಬೇಕೆಂದು ಮಾಹಿತಿ ನೀಡಿರುವ ಆಯೋಜಕರು ಈ ಮೇಳದಲ್ಲಿ 35 ಕಂಪನಿಗಳು ಭಾಗವಹಿಸಲಿವೆ ಎಂದು ತಿಳಿಸಿದ್ದಾರೆ.

ಏ.25 ರಂದು ಒಂದು ದಿನ ಮೈಸೂರಿನ ಎಸ್ ಜೆಸಿಇ ಇಂಜಿನಿಯರಿಂಗ್ ಕಾಲೇಜು ಸಹೋಗದೊಂದಿಗೆ ನಗರದ ಯಂಗ್ ಇಂಡಿಯಾ ಸಂಸ್ಥೆಯ ಯುವಕರು ಮೈಸೂರು ಜಿಲ್ಲೆಯ ಪ್ರಾದೇಶಿಕ ಜಿಲ್ಲೆಗಳಾದ ಮಂಡ್ಯ, ಹಾಸನ, ಮಡಿಕೇರಿ, ಹಾಗೂ ಚಾಮರಾಜನಗರ ಜಿಲ್ಲೆಯ ಯುವಕರಿಗಾಗಿ ಯುವ ಜಾಬ್ ಫೇರ್/2026 ನ್ನು ಆಯೋಜನೆ ಮಾಡಿದೆ. ಈ ಉದ್ಯೋಗ ಮೇಳದಲ್ಲಿ ಕೈಗಾರಿಕೆ ಮತ್ತು ಉದ್ಯೋಗ ಆಕಾಂಕ್ಷಿಗಳ ನಡುವಿನ ವೇದಿಕೆಯನ್ನು ಯಂಗ್ ಇಂಡಿಯಾ ಸಂಸ್ಥೆ ನಿರ್ಮಿಸುತ್ತಿದ್ದಾರೆ. ಈ ಮೇಳದಲ್ಲಿ 35ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ. 2000ಕ್ಕೂ ಹೆಚ್ಚು ಉದ್ಯೋಗ ಅವಕಾಶಗಳು ಇವೆ. ಆಯ್ಕೆ ಪ್ರಕ್ರಿಯೆ ಹಾಗೂ ನೋಂದಣಿ ಉಚಿತವಾಗಲಿದ್ದು, ಈ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಇ-ಮೇಲ್ ಅಥವಾ ಫೋನ್ ನಂಬರ್‌ಗಳ ಮೂಲಕ ನೋಂದಾಯಿಸಿಕೊಳ್ಳಬಹುದು ಎಂದು ಆಯೋಜಕರು ತಿಳಿಸಿದ್ದಾರೆ.

ಮೈಸೂರು ಜಿಲ್ಲೆ ಸೇರಿದಂತೆ 5 ಜಿಲ್ಲೆಗಳ ಇಂಜಿನಿಯರಿಂಗ್, ಎಂಬಿಎ, ಕಾಮರ್ಸ್, ಆರ್ಟ್ಸ್, ಪ್ಯಾರಾಮೆಡಿಕಲ್, ಡಿಪ್ಲೊಮಾ ಹಾಗೂ ಐಟಿಐ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಇದರ ಜೊತೆಗೆ ವಿಕಲಚೇತನರು ಹಾಗೂ ವೃತ್ತಿ ಜೀವನದ ವಿರಾಮದ ಬಳಿಕ ಮತ್ತೆ ಉದ್ಯೋಗಾವಕಾಶಕ್ಕೆ ಮರಳುವ ಮಹಿಳೆಯರಿಗೂ ಅವಕಾಶ ಇದೆ. ಇದರ ಉದ್ದೇಶ ಯುವ ಜನರಿಗೆ ಉದ್ಯೋಗ ಒದಗಿಸುವ ವೇದಿಕೆಯಾಗಿದೆ. ನೋಂದಣಿ ಹಾಗೂ ಎಲ್ಲಾ ಆಯ್ಕೆ ಪ್ರಕ್ರಿಯೆಗಳು ಉಚಿತವಾಗಿ ನಡೆಯಲಿವೆ ಎಂದು ಯಂಗ್ ಇಂಡಿಯಾ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಪ್ರಿಯಾಂಕಾ ಶ್ರೀಧರ್ ಮಾಹಿತಿ ನೀಡಿದ್ದಾರೆ.

# ಬಾಗಲಕೋಟೆ: ಪೊಲೀಸ್ ಠಾಣೆ ಮೇಲೆ ಲೋಕಾಯುಕ್ತ ದಾಳಿ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದ ಪಿಎಸ್‌ಐ ಕಾನ್ಸ್‌ಟೇಬಲ್ ಬಂಧನ

**ಬಾಗಲಕೋಟೆ,ಏ.22-**ಲೋಕಾಯುಕ್ತ ಪೊಲೀಸರು ಬುಧವಾರ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ಕೆರೂರು ಪೊಲೀಸ್ ಠಾಣೆ ಮೇಲೆ ದಾಳಿ ನಡೆಸಿದ್ದು, 1.70 ಲಕ್ಷ ರೂಪಾಯಿ ಲಂಚ ಪಡೆಯುತ್ತಿದ್ದ ಪಿಎಸ್‌ಐ ಮತ್ತು ಕಾನ್ಸ್‌ಟೇಬಲ್ ರೆಡ್ ಹ್ಯಾಂಡ್ ಆಗಿ ಬಲೆಗೆ ಬಿದ್ದಿದ್ದಾರೆ. ಲಂಚ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದ ಕೆರೂರು ಪೊಲೀಸ್ ಠಾಣೆಯ ಪಿಎಸ್‌ಐ ಭೀಮಪ್ಪ ರಬಕವಿ ಮತ್ತು ಪೇದೆ ಸಂತೋಷ್ ಬಿರಾದರ್ ಅವರನ್ನು ಬಂಧಿಸಲಾಗಿದೆ. ಆರೋಪಿಗಳು, ಇಸ್ಪೀಟ್ ಆಡುವಾಗ ಸಿಕ್ಕಿಬಿದ್ದಿದ್ದ ಆರೋಪಿಯನ್ನು ಪ್ರಕರಣದಿಂದ ಕೈಬಿಡಲು ಹಾಗೂ ಆತನ ಬೈಕ್ ಬಿಡಲು 2 ಲಕ್ಷ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು.

ಅದರಂತೆ 1.70 ಲಕ್ಷ ರೂ. ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಲಂಚದ ಬೇಡಿಕೆ ಬಗ್ಗೆ ಮುತ್ತಪ್ಪ ನಾಯ್ಕರ್ ಎಂಬವರು ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಫೋನ್ ಕರೆ ರೆಕಾರ್ಡಿಂಗ್ ಆಧಾರದ ಮೇಲೆ ದಾಳಿ ಮಾಡಿ ಇಬ್ಬರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದು, ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ. ಲೋಕಾಯುಕ್ತ ಎಸ್.ಪಿ ಮಹಾಲಿಂಗ್ ನಂದಗಾಂವಿ ಮಾರ್ಗದರ್ಶನದಲ್ಲಿ, ಲೋಕಾಯುಕ್ತ ಡಿವೈಎಸ್‌ಪಿ ಸುರೇಶ್ ರೆಡ್ಡಿ ನೇತೃತ್ವದಲ್ಲಿ ಈ ದಾಳಿ ನಡೆದಿದೆ.

# ಬೆಳಗಾವಿಯಲ್ಲಿ ತಿರುಪತಿ ಮಾದರಿ ಬಾಲಾಜಿ ದೇವಾಲಯ: 100 ಕೋಟಿ ರೂ. ವೆಚ್ಚ, ಟಿಟಿಡಿ ಆಡಳಿತ ಮಂಡಳಿ ಮಾಹಿತಿ

**ಬೆಳಗಾವಿ,ಏ.22-**ಆಂಧ್ರಪ್ರದೇಶದ ತಿರುಮ ಲ ಬೆಟ್ಟದ ಮೇಲಿರುವ ಸುಪ್ರಸಿದ್ಧ ವೆಂಕಟೇಶ್ವ ರಸ್ವಾಮಿ (ಬಾಲಾಜಿ) ದೇವಾಲಯ ಮಾದರಿ ಯಲ್ಲಿ, ಬೆಳಗಾವಿ ನಗರದ ಹೊರವಲಯದ ಏಳು ಎಕರೆ ಪ್ರದೇಶದಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಬೃಹತ್ ವೆಂಕಟೇಶ್ವರ ದೇವಸ್ಥಾನ ನಿರ್ಮಾಣ ಮಾಡಲಾಗುತ್ತಿದೆ ಎಂದು ಟಿಟಿಡಿ ಆಡಳಿತ ಮಂಡಳಿಯ ಸದಸ್ಯ ಎಸ್. ನರೇಶ ಕುಮಾರ ತಿಳಿಸಿದರು.



ಬೆಳಗಾವಿಯಲ್ಲಿ ಮಂಗಳವಾರ ಮಾಧ್ಯಮ ಗೋಷ್ಠಿ ನಡೆಸಿ ಮಾತನಾಡಿದ ಅವರು, ಈಗಾಗಲೇ ದೇವಸ್ಥಾನ ನಿರ್ಮಾಣಕ್ಕೆ ಬೆಳಗಾವಿ ರೆಡ್ಡಿ ಸಂಘವು 7 ಎಕರೆ ಜಮೀನನ್ನು ಟಿಟಿಡಿಗೆ ಹಸ್ತಾಂತರಿಸಿದೆ. ದೇವಸ್ಥಾನ ನಿರ್ಮಾಣ, ವೆಂಕಟೇಶ್ವರ ಮೂರ್ತಿ, ಕಟ್ಟಡದ ಕಲ್ಲು ಸೇರಿ ಎಲ್ಲವೂ ಆಂಧ್ರ ಪ್ರದೇ ಶದಿಂದಲೇ ಬರಲಿವೆ. ಮುಂದಿನ ಎರಡು ವರ್ಷಗಳಲ್ಲಿ ದೇವಸ್ಥಾನ ನಿರ್ಮಾಣ ಪೂರ್ಣಗೊಳಿ ಸುವ ಗುರಿ ಹಾಕಿಕೊಂಡಿದ್ದೇವೆ ಎಂದರು.

ಕರ್ನಾಟಕ, ಮಹಾರಾಷ್ಟ್ರ, ಗೋವಾ ಮೂರು ರಾಜ್ಯದ ಕೇಂದ್ರ ಸ್ಥಾನವಾಗಿರುವ ಬೆಳಗಾವಿಯಲ್ಲಿ ವೆಂಕಟೇಶ್ವರ ನಿರ್ಮಾಣದಿಂದ ಲಕ್ಷಾಂತರ ಭಕ್ತರಿಗೆ ಹೆಚ್ಚಿನ ಅನುಕೂಲವಾಗಲಿದೆ. ಅಲ್ಲದೆ, 900 ಕಿ.ಮೀ ದೂರದ ತಿರುಪತಿಗೆ ಹೋಗುವುದು ತಪ್ಪಲಿದೆ. ಮಹಾರಾಷ್ಟ್ರ ಕೊಲ್ಲಾಪುರದಲ್ಲಿರುವ ಲಕ್ಷ್ಮೀ ದೇವಸ್ಥಾನಕ್ಕೆ ಹೋಗಿಬರಲು ಭಕ್ತರಿಗೆ ಅವಕಾಶ ಸಿಗಲಿದೆ. ತಿರುಮಲದಲ್ಲಿರುವ ಧಾರ್ಮಿಕ ಕಾರ್ಯಕ್ರಮ ಮಾದರಿಯಲ್ಲಿಯೇ ಇಲ್ಲಿ ಪೂಜಾ-ವಿಧಾನಗಳು ನಡೆಯಲಿದ್ದು, ಭಕ್ತರಿಗೆ ವಸತಿ, ಪ್ರಸಾದ (ಲಾಡು) ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಎಸ್. ನರೇಶಕುಮಾರ ಹೇಳಿದರು.

ಬೆಳಗಾವಿಯಲ್ಲಿ ವೆಂಕಟೇಶ್ವರಸ್ವಾಮಿ ದೇವಸ್ಥಾನ ನಿರ್ಮಾಣದ 100 ಕೋಟಿ ರೂ. ವೆಚ್ಚದಲ್ಲಿ ಶೇ.80ರಷ್ಟು ಹಣವನ್ನು ಟಿಟಿಡಿ ನೀಡುತ್ತಿದೆ. ಬಾಕಿ ಉಳಿದಿರುವ ಶೇ.10ರಷ್ಟು ರೆಡ್ಡಿ ಸಂಘ ಹಾಗೂ ಶೇ.10ರಷ್ಟು ಹಣವನ್ನು ದಾನಿಗಳಿಂದ ಸಂಗ್ರಹಿಸಲಾಗುವುದು. ಸರ್ಕಾರದಿಂದ ಯಾವುದೇ ರೀತಿಯ ಅನುದಾನ, ಸೌಲಭ್ಯ ಪಡೆದುಕೊಳ್ಳುತ್ತಿಲ್ಲ. ದಾನಿಗಳು, ಭಕ್ತರಿಂದಲೇ ದೇವಸ್ಥಾನ ನಿರ್ಮಾಣವಾಗಲಿದೆ. ಈಗಾಗಲೇ ಟಿಟಿಡಿ ಸಂಸ್ಥೆ ದೇಶದ ವಿವಿಧ ಭಾಗಗಳಲ್ಲಿ ದೇವಸ್ಥಾನಗಳ ನಿರ್ಮಾಣ ಮತ್ತು ಪುನರುಜ್ಜೀವನಕ್ಕಾಗಿ 9 ಸಾವಿರ ಕೋಟಿ ರೂ.ಮೊತ್ತವನ್ನು ಮೀಸಲಿಟ್ಟಿದ್ದು, ಆರು ಕಡೆಗಳಲ್ಲಿ ಟಿಟಿಡಿ ದೇವಸ್ಥಾನಗಳು ಕಾರ್ಯನಿರ್ವಹಿಸುತ್ತಿವೆ ಎಂದು ಎಸ್. ನರೇಶ ಕುಮಾರ ವಿವರಿಸಿದರು.

ಕರ್ನಾಟಕ ರಾಜ್ಯ ರೆಡ್ಡಿ ಜನಸಂಘದ ಅಧ್ಯಕ್ಷ ಲಕ್ಷ್ಮಣ ರೆಡ್ಡಿ ಮಾತನಾಡಿ, ಬೆಳಗಾವಿಯಲ್ಲಿ ಟಿಟಿಡಿ ವತಿಯಿಂದ ದೇವಸ್ಥಾನ ನಿರ್ಮಾಣ ಆಗುತ್ತಿರುವುದು ಅತ್ಯಂತ ಹೆಮ್ಮೆಯ ಸಂಗತಿ. ಇದಕ್ಕೆ ರೆಡ್ಡಿ ಸಂಘದ ಕೊಡುಗೆ ಮಹತ್ವದ್ದಾಗಿದೆ. ಸಹಕಾರ ಇದೇ ರೀತಿ ಮುಂದುವರಿಯಲಿ ಎಂದು ಮನವಿ ಮಾಡಿದರು.

ಮಾಧ್ಯಮಗೋಷ್ಟಿಯಲ್ಲಿ ಬೆಳಗಾವಿ ರೆಡ್ಡಿ ಸಂಘದ ಅಧ್ಯಕ್ಷ ರಾಮಣ್ಣ ಮುಳ್ಳೂರ, ಉಪಾಧ್ಯಕ್ಷ ಕಾಂತು ಜಾಲಿಬೇರಿ, ವಿಕ್ರಂ ಜೈನ್, ಅವಿನಾಶ ಪೋತದಾರ, ಸುರೇಶ ದೇಸಾಯಿ, ಮಂಜುನಾಥ ಕೇಸೂರ, ಪ್ರಕಾಶ ಕಕರಡ್ಡಿ, ಡಾ. ಗಿರೀಶ ಸೋನವಾಲ್ಕರ ಸೇರಿ ಮತ್ತಿತರರು ಇದ್ದರು.

## ನವಲಕಲ್ : ಡಾ.ಬಿ.ಆರ್. ಅಂಬೇಡ್ಕರ್ ರವರ ಪುತ್ಥಳಿ ಅನಾವರಣ
# ಅಂಬೇಡ್ಕರ್ ರವರ ಆದರ್ಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಿ-ಅಭಿನವ ಶ್ರೀ

■ ಕನ್ನಡ ಮಾತೃ ಭೂಮಿ ವಾರ್ತೆ

**ಸಿರವಾರ,ಏ.21-** ಬಾಬಾ ಸಾಹೇಬ್ ಅಂಬೇಡ್ಕರ್ ರವರ ಮೂರ್ತಿ ಪ್ರತಿಷ್ಠಾಪನೆಯ ಜತೆಗೆ ಬಾಬಾ ಸಾಹೇಬರ ತತ್ವ-ಆದರ್ಶಗಳನ್ನು ಕೂಡ ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ನವಲಕಲ್ ಶಾಂಭವಿ ಸಂಸ್ಥಾನ ಬೃಹನ್ಮಠದ ಪೀಠಾಧಿಪತಿಗಳಾದ ಅಭಿನವ ಸೋಮನಾಥ ಶಿವಾ ಚಾರ್ಯ ಸ್ವಾಮೀಜಿಯವರು ಹೇಳಿ ದರು.

ತಾಲೂಕಿನ ನವಲಕಲ್ ಗ್ರಾಮದಲ್ಲಿ ಹೈದ್ರಾಬಾದ್ ಕರ್ನಾಟಕ ದಲಿತ ಸಂಘರ್ಷ ಸಮಿತಿ ತಾಲ್ಲೂಕ ಸಮಿತಿ ವತಿ ಯಿಂದ ಮಂಗಳವಾರ ಆಯೋಜಿಸಿದ್ದ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇ ಡ್ಕರ್ ರವರ ಪುತ್ಥಳಿಯನ್ನು ಅನಾವರಣ ಗೊಳಿಸಿ ಶ್ರೀಗಳು ಮಾತನಾಡಿದರು. ನಂತರ ಮಾಜಿ ಸಚಿವ ಕೆ.ಶಿವನಗೌಡ ನಾಯಕ ಮಾತನಾಡಿ, ಶೋಷಿತ ಸಮು ದಾಯಗಳು ಇಂದಿನ ದಿನಮಾನಗಳಲ್ಲಿ ಶಿಕ್ಷಣ ಮತ್ತು ಉದ್ಯೋಗಕ್ಕೆ ಹೆಚ್ಚಿನ ಒತ್ತು ನೀಡಿದಾಗ ಮಾತ್ರ ಆರ್ಥಿಕವಾಗಿ ಸದೃಢ ರಾಗಲು ಶಕ್ತಿ ಬರುತ್ತದೆ. ಪ್ರತಿಯೊಂದು ಮನೆಯಲ್ಲಿ ಕೇವಲ ಒಬ್ಬ ವ್ಯಕ್ತಿ ವಿದ್ಯಾವಂತನಾದರೆ ಸಾಕು ಆ ಮನೆಯ ವ್ಯವಸ್ಥೆಯೇ ಬದಲಾವಣೆಯ ಹಾದಿಯತ್ತ ಸಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬಳಿಕ ಸಿರವಾರದ ಹಿರಿಯ ವಾಣಿಜ್ಯೋದ್ಯಮಿಗಳಾದ ಚುಕ್ಕಿ ಸೂಗಪ್ಪ ಸಾಹುಕಾರ ರವರು ಮಾತನಾಡಿ, ಏಸುಮಿತ್ರಪ್ಪ ಅವರು ಬಾಬಾ ಸಾಹೇಬ್ ಅಂಬೇಡ್ಕ ರ್ ರವರ ಮೂರ್ತಿ ಪ್ರತಿಷ್ಠಾಪನೆಗೆ ಅಗತ್ಯ ಸಹಾಯಧನವನ್ನು ನೀಡುವ ಮೂಲಕ ಎಲ್ಲಾ ಸರ್ಕಾರಿ ನೌಕರರಿಗೆ ಮಾದರಿಯಾಗಿ ದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅದ್ದೂರಿ ಮೆರವಣಿಗೆ: ಕಾರ್ಯ ಕ್ರಮ ಪ್ರಾರಂಭಕ್ಕೂ ಮೊದಲು ನವಲಕಲ್ ಗ್ರಾಮದ ಮಹರ್ಷಿ ವಾಲ್ಮೀಕಿ ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರ್ ರವರ ಮೂ ರ್ತಿ ವರೆಗೆ ಬಾಬಾ ಸಾಹೇಬ್ ಅಂಬೇ ಡ್ಕರ್ ರವರ ಭಾವಚಿತ್ರದ ಮೆರವಣಿಗೆ ಅತ್ಯಂತ ಅದ್ದೂರಿಯಾಗಿ ಜರುಗಿತು.





ಮೂರ್ತಿ ದಾನಿಗೆ ಸನ್ಮಾನ: ನವಲಕಲ್ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಬೃಹತ್ ಮೂರ್ತಿಯ ನ್ನು ಸ್ವಯಂ ಪ್ರೇರಿತರಾಗಿ ದಾನ ನೀಡಿದ ಸಿರವಾರ ತೋಟಗಾರಿಕೆ ಇಲಾಖೆಯ ಏಸುಮಿತ್ರಪ್ಪ ಇವರನ್ನು ಅಂಬೇಡ್ಕರ್ ರವರ ಅನುಯಾಯಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಮುಖಂಡರುಗಳು, ಪ್ರಗತಿಪರ ಚಿಂತಕರು, ಬುದ್ಧಿಜೀವಿಗಳು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎನ್.ಉದಯಕುಮಾರ್ ಸಾಹುಕಾರ, ದೇವಣ್ಣ ನವಲಕಲ್, ನಾಗಪ್ಪ ನವಲಕಲ್, ಅಮರೇಗೌಡ ನವಲಕಲ್, ಬಿಎಸ್ಪಿ ರಾಜ್ಯ ಕಾರ್ಯದರ್ಶಿ ಎಂ.ಬಸವರಾಜ ಭಂಡಾರಿ, ಬಹುಜನ ಸಂಘರ್ಷ ಸಮಿತಿ ಯ ಮಹಾ ಪೋಷಕ ಎಂ.ಆರ್.ಭೇರಿ, ಸಂಸ್ಥಾಪಕ ಜೆ.ಶರಣಪ್ಪ ಬಲ್ಲಟಗಿ, ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ಎಲ್.ವಿ. ಸುರೇಶ, ಹಸಿರು ಸೇನೆ ಸಂಘಟನೆಯ ಜಿಲ್ಲಾಧ್ಯಕ್ಷೆ ಅನಿತಾ ಮಂತ್ರಿ, ಗ್ರಾ.ಪಂ ಮಾಜಿ ಅಧ್ಯಕ್ಷ ಬಸವರಾಜ ಬುಲೆಟ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರೀಫ್ ಮಿಯಾ, ಎ.ಎಸ್.ಐ ಬಸನಗೌಡ, ಪಿಡಿಒ ವಿಜಯಕುಮಾರ್, ಶಾಲಾ ಮುಖ್ಯಗುರುಗಳಾದ ಮಲ್ಲಪ್ಪ ಚಾಗಭಾವಿ, ಮೌನೇಶ ಹಿರೇಹಣಗಿ, ಶಿವಪ್ಪ ಹಿರೇಹಣಗಿ, ವಕೀಲರಾದ ಯಲ್ಲಪ್ಪ ಹಿರೇಬಾದರದಿನ್ನಿ, ಮಲ್ಲೇಶ ಮಾಚನೂರು, ಹನುಮಂತ ಬ್ಯಾಗವಾಟ್, ವಿವಿಧ ಸಂಘ-ಸಂಸ್ಥೆಗಳ ಮುಖಂಡರಾದ ಡಿ.ಎಚ್. ಭೀಮಣ್ಣ, ದೇವಪುತ್ರಪ್ಪ ಚಿಟ್ಟಿ, ಯಲ್ಲಪ್ಪ ನವಲಕಲ್, ನಾಗರಾಜ ಸಿರವಾರ, ಮೌನೇಶ ನವಲಕಲ್, ತಿಮ್ಮಣ್ಣ ಮರಾಟ, ಹನುಮೇಶ ಭೇರಿ, ಮೌನೇಶ ಶಾಖಾಪೂರು, ರಮೇಶ ಲಕ್ಕಮದಿನ್ನಿ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಉಪಸ್ಥಿತರಿದ್ದರು.

# ಆದಿ ಶಂಕರಾಚಾರ್ಯ ಜಯಂತಿ ಆಚರಣೆ : ಆತ್ಮಜ್ಞಾನವೇ ಮೋಕ್ಷದ ಮಾರ್ಗ-ಸಿದ್ದಾರ್ಥ ಕಾರಂಜಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಸಿರುಗುಪ್ಪ,ಏ.21-** ತಾಲೂಕು ಕಚೇರಿ ಸಭಾಭವನದಲ್ಲಿ 1239ನೇ ಆದಿ ಶಂಕರಾಚಾರ್ಯ ಜಯಂ ತಿಯನ್ನು ವಿವಿಧ ಇಲಾಖೆಗಳ ಸಹಭಾಗಿತ್ವ ದಲ್ಲಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಉಪ ತಹಶೀ ಲ್ದಾರ್ ಸಿದ್ದಾರ್ಥ ಕಾರಂಜಿ ಮಾತನಾಡಿ, ಮನುಷ್ಯನು ಜಾತಿ-ಮತ ಭೇದಭಾ ವಗಳಲ್ಲಿ ಸಿಲುಕಿಕೊಂಡು ಸ್ವಾರ್ಥಿಯಾಗುತ್ತಿದ್ದಾನೆ. ಆತ್ಮಜ್ಞಾನ ಹೊಂದಿದವರಿಗೆ ಇಂತಹ ಭೇದ ಭಾವಗಳ ಬಂಧನವಿರುವು ದಿಲ್ಲ, ಜಗತ್ತಿಗೆ ಭಗವಂತನೇ ಮೂಲ ಎಂದು ಹೇಳಿದರು. ಜಗದ್ಗುರು ಶ್ರೀ ಆದಿ ಶಂಕರಾಚಾ ರ್ಯರ ಭಾವಚಿತ್ರಕ್ಕೆ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.

ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಶಾಂತಿ ಸಭೆ ಸದಸ್ಯ ಹಾಗೂ ಸಮಾಜ ಸುಧಾರಕ ಅಬ್ದುಲ್ ನಬೀ ಮಾತನಾಡಿ, ಜ್ಞಾನದಿಂದಲೇ ಅಜ್ಞಾನ ನಿವಾರಣೆಯಾಗುತ್ತದೆ ಮತ್ತು ಮೋಕ್ಷ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು.

ಇಂದಿನ ಸಮಾಜದಲ್ಲಿ ಜಾತಿ ಪ್ರೇಮ ಹಾಗೂ ವೈಮನಸ್ಸು ಹೆಚ್ಚುತ್ತಿರುವುದರಿಂದ ಮಾನವೀಯತೆ ಕುಗ್ಗುತ್ತಿದೆ. ನಾಗರಿಕತೆ ಬೆಳೆಯುತ್ತಿದ್ದರೂ ಮನುಷ್ಯನಲ್ಲಿ ಅನಾ ಗರಿಕತೆ ಹೆಚ್ಚುತ್ತಿದೆ ಎಂದು ಅವರು ವಿಷಾ ದ ವ್ಯಕ್ತಪಡಿಸಿದರು. ಮಾನವತೆ ಮೌಲ್ಯ ಗಳನ್ನು ಹೆಚ್ಚಿಸಲು ಪ್ರತಿಯೊಬ್ಬ ರೂ ಪ್ರಯತ್ನಿಸಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಕಂದಾಯ ಇಲಾಖೆಯ ಸಿಬ್ಬಂದಿಗಳಾದ ತುರ್ಷಾ, ಖಲಂದರ್, ಗಿರಿಯಪ್ಪ, ಶೇಖ್, ಸಮಾಜ ಸೇವಕ ಮೊಹಮ್ಮದ್ ನೌಶಾದ್ ಅಲಿ ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ...ಮೊದಲನೇ ಪುಟದಿಂದ

## ರೈಲ್ವೆ ನಿಲ್ದಾಣದಿಂದ ಯರಮರಸ್ ಸ್ಥಳಾಂತರಿಸಲು ಉದ್ದೇಶಿಸಿ ಗೂಡ್ ಶೆಡ್ ಪ್ರಸ್ತಾವನೆ ರದ್ದು

ಸುಮಾರು ಮೂರುಜನ ಸಂಸದರು ಹೇಳುತ್ತಲೇ ಬಂದಿದ್ದರು. 2020-21 ಮತ್ತು 2021-22 ಸಾಲಿನಲ್ಲಿ 22.15 ಕೋಟಿ ರೂ ಅಂದಾಜು ಯೋಜನೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ಹಣದ ಕೊರತೆಯಿಂದಾಗಿ ಸ್ಥಳಾಂತರ ಬಾಕಿ ಉಳಿದಿತ್ತು. ಯರಮರಸ್ ಸ್ಥಳದ ನವೀಕರಣಪೂರ್ಣಗೊಂಡ ನಂತರ ಸ್ಥಳಾಂತರ ಗೊಳಿಸುವ ಭರವಸೆ ನೀಡುತ್ತಲೇ ಬರಲಾಗಿತ್ತು. ರಾಯಚೂರು ರೈಲ್ವೆನಿಲ್ದಾಣದಿಂದ ರಸಗೊಬ್ಬರ ಸೇರಿದಂತೆ ಸರಕು ಸಾಗಣೆಗೆ ಅವಶ್ಯಕತೆಯಿತ್ತು. ನಗರದಲ್ಲಿ ರಸಗೊಬ್ಬರ ಸಾಗಾಣೆ ಲಾರಿಗಳ ಸಂಚಾರ ದಟ್ಟಣೆಯಿಂದ ಅನೇಕ ರಸ್ತೆ ಅಪಘಾತಗಳು,ಜೀವ ಬಲಿಯಾಗಿರುವ ಘಟನೆಗಳ ಹಿನ್ನಲೆಯಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿದ್ದರೂ ರೈಲ್ವೆ ಮಂತ್ರಾಲಯ ಪ್ರಸ್ತಾವನೆಯನ್ನೇ ಕೈ ಬಿಟ್ಟಿರುವದಾಗಿ ಹೇಳಿರುವದು ಚರ್ಚೆಗೆ ಗ್ರಾಸವಾಗಿದೆ.

## ಮಹಿಳಾ ಮೀಸಲಾತಿ ಕಾಂಗ್ರೆಸ್ ಸೇರಿ ಹಲವು ರಾಜಕೀಯ ಪಕ್ಷಗಳ ಅಸಹಕಾರ

ಮೊದಲ ಪ್ರಧಾನಿಯಾಗಿದ್ದ ಜವಾಹರ ಲಾಲ್ ನೆಹರು ಸಚಿವ ಸಂಪುಟದಲ್ಲಿ ಕಾನೂನು ಸಚಿವರಾಗಿದ್ದ ಡಾ.ಬಿ.ಆರ್. ಅಂಬೇಡ್ಕರ ಇವರು ಮಹಿಳೆಯರಿಗೆ ಸಮಾಜ ಅವಕಾಶ ಹಕ್ಕಾಗಿ ನೀಡಬೇಕೆನ್ನುವ ಕನಸು ಹೊಂದಿದ್ದರು. ಸುಧೀರ್ಘ ಕಾಲ ದೇಶದ ಆಡಳಿತ ನಡೆಸಿರುವ ಕಾಂಗ್ರೆಸ್ ಇಂದಿಗೂ ಮನಸ್ಥಿತ ಬದಲಾಯಿಸಿಕೊಂಡಿಲ್ಲ. ಮುಸೂದೆಗೆ ಕಾಂಗ್ರೆಸ್, ಸಮಾಜವಾದಿ, ಡಿಎಂಕೆ ಸೇರಿದಂತೆ ಅನೇಕರು ಬೆಂಬಲಸದೇ ಇರುವದಿರಂದ ಮಹಿಳಾ ಮೀಸಲಾ ಕಾಯ್ದೆ ಅಂಗೀಕಾರಗೊಳ್ಳದೇ ಹೋಗಿದೆ. 2023 ರಲ್ಲಿ ಮಹಿಳಾ ಮೀಸಲು ಮಸೂದೆ ಮಂಡನೆಯಾಗಿದ್ದರೂ ಜಾರಿಯಾಗದೇ ಹೋಗಿದೆ. ಪ್ರಧಾನಿ ನರೇಂದ್ರ ಮತ್ತು ಗೃಹ ಸಚಿ ಅಮಿತಾಷಾ ಇವರು ಎಲ್ಲರಾಜಕೀಯ ಪಕ್ಷಗಳೊಂದಿಗೆ ಪೂರ್ವಭಾವಿ ಚರ್ಚೆ ನಡೆಸಿ ಬೆಂಬಲ ಕೋರಿದ್ದರೂ ಅನೇಕ ರಾಜಕೀಯ ಪಕ್ಷಗಳು ಬೆಂಬಲಿಸದೇಹೋಗಿವೆ. 2011 ಜನಗಣತಿಯ ಆದಾರದ ಮೇಲೆ ಕ್ಷೇತ್ರ ಪುನರ್ ವಿಂಗಡನೆಯೂ ದೇಶದ ರಾಜಕೀಯ ಚಿತ್ರಣಬದಲಿಸಲು ಕಾರಣವಾಗುತ್ತದೆ. ಮೂರು ಮಸೂದೆಗಳ ಜಾರಿಗೆ ಅನೇಕ ರಾಜಕೀಯ ಪಕ್ಷಗಳ ಬೆಂಬಲಿಸದೇ ಹೋಗಿದ್ದರಿಂದ ಜಾರಿ ಸಾಧ್ಯವಾಗಿಲ್ಲ. ಮಹಿಳೆಯರು ಕುರಿತು ನಿಜವಾದ ಕಾಳಜಿಯಿದ್ದರೆ ಮಸೂದೆಗೆ ಬೆಂಬಲಿಲಿ ಎಂದರು. ಈ ಸಂದರ್ಬದಲ್ಲಿ ಪಕ್ಷ ರಾಜ್ಯ ಉಪಾಧ್ಯಕ್ಷ ಮಹಾಂತೇಶ ಪಾಟೀಲ್ ಅತ್ತನೂರು , ನಗರ ಅಧ್ಯಕ್ಷ ಬಿ.ತಿಮ್ಮಾರೆಡ್ಡಿ, ರಮಾಬಾಯಿ, ಸಣ್ಣ ನರಸಿಂಹನಾಯಕ, ಎನ್.ಶಿವಶಂಕರ, ಅಮರೇಶ ಪಾಟೀಲ್ ಆಶಾಪುರು, ಹಂಪಣ್ಣ ಸೇರಿ ಅನೇಕರಿದ್ದರು.

## ವಿಚಾರಣಾಧಿಕಾರಿ ನೇಮಕಾತಿ ರದ್ದು, 30 ದಿನಗಳಲ್ಲಿ ವರದಿ ಸಲ್ಲಿಸಲು ಸೂಚನೆ

ಪರಿಶೀಲನೆ ನಡೆಸಿ, ಸೂಕ್ತ ವರದಿಯನ್ನು 30 ದಿನಗಳೊಳಗೆ ಆಯೋಗಕ್ಕೆ ಸಲ್ಲಿಸುವಂತೆ ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು2005ರ ನಿಯಮ 9(3)ರ ಅನ್ವಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರಿಗೆ ಆದೇಶ ನೀಡಿದೆ.

ಮೇಲ್ಮನವಿದಾರರು ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ ಪಡೆದಿರುವ ಅಥವಾ ಪಡೆಯದೇ ಇರುವ ಬಗ್ಗೆ ಸ್ಪಷ್ಟ ಮತ್ತು ಲಿಖಿತವಾದ ವಿವರವನ್ನು ಮುಂದಿನ ವಿಚಾರಣಾ ದಿನಾಂಕದಂದು ಆಯೋಗಕ್ಕೆ ಸಲ್ಲಿಸಬೇಕೆಂದು ಸೂಚಿಸಿದೆ. ಈ ಸೂಚನೆಯನ್ನು ಪಾಲಿಸದಿದ್ದಲ್ಲಿ ಪ್ರಕರಣವನ್ನು ಲಭ್ಯ ಮಾಹಿತಿಯ ಆಧಾರದ ಮೇಲೆ ತೀರ್ಮಾನಿಸಲಾಗುವುದೆಂದು ಎಚ್ಚರಿಕೆ ನೀಡಲಾಗಿದೆ.

ಇನ್ನೂ, ಕೈಗೊಂಡ ಕ್ರಮಗಳ ಪರಿಶೀಲನೆಗಾಗಿ ಪ್ರಕರಣದ ಮುಂದಿನ ವಿಚಾರಣೆಯನ್ನು ದಿನಾಂಕ 13.05.2026ರಂದು ಬೆಳಿಗ್ಗೆ 10.00 ಗಂಟೆಗೆ ನಿಗದಿಪಡಿಸಲಾಗಿದ್ದು, ವೆಬೆಕ್ಸ್ ಆನ್‌ಲೈನ್ ಲಿಂಕ್ ಮೂಲಕ ಅಥವಾ ಖುದ್ದಾಗಿ ಹಾಜರಾಗುವಂತೆ ಸಂಬಂಧಪಟ್ಟವರಿಗೆ ಸೂಚಿಸಲಾಗಿದೆ. ಆಯೋಗವು ಈ ಆದೇಶವನ್ನು ತನ್ನ ರುಜುವಿನೊಂದಿಗೆ ನ್ಯಾಯಾಲಯದಲ್ಲಿ ಘೋಷಿಸಿದ್ದು, ತೀರ್ಪು ಬರಹಗಾರರಿಂದ ಕರಡು ತಿದ್ದುಪಡಿ ಮಾಡಿಸಿ ಅಂತಿಮಗೊಳಿಸಿದೆ.

## ಮಧುರಗೀತೆಗಳ ರಸಮಂಜರಿ-ವೀರೇಶಕುಮಾರ

ಗಾಯಕರು ಡಾ.ರಾಜಕುಮಾರ ಅವರ ಗೀತೆಗಳನ್ನು ಪ್ರಸ್ತುತ ಪಡಿಸಲಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಭಾಗವಹಿಸುವ ಪ್ರತಿಯೊಬ್ಬರಿಗೂ ಉಚಿತ ಲಕ್ಕಿ ಡ್ರಾ ನೀಡಲಾಗುತ್ತದೆ. ಅದರ ಮೂಲಕ ಬೆಳ್ಳಿ ನಾಣ್ಯವನ್ನು ಪಡೆಯುವ ಅವಕಾಶ ವಿರುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಕೃಷ್ಣಮೂರ್ತಿ, ನರೇಂದ್ರ, ಶ್ರೀನಿವಾಸರಾವ್, ಕೃಷ್ಣ, ರಮೇಶ, ಗುರುರಾಜ ಸೇರಿದಂತೆ ಅನೇಕರಿದ್ದರು.

## ಸಾಮ್ರಾಜ್ಯಶಾಹಿ ವಿರುದ್ಧ ಹೋರಾಟಕ್ಕೆ ಅಜೀಜ್ ಜಹಾಗೀರದಾರ ಕರೆ

ಗೋಚರಿಸುತ್ತಿವೆ ಎಂದು ತಿಳಿಸಿದರು. ಪಶ್ಚಿಮ ಏಷ್ಯಾದಲ್ಲಿ ಉದ್ಯೋಗದಲ್ಲಿರುವ ಭಾರತೀಯರ ಭದ್ರತೆ ಪ್ರಶ್ನಾರ್ಥಕವಾಗಿದ್ದು, ದೇಶದಲ್ಲಿ ಇಂಧನ ಮತ್ತು ಗೊಬ್ಬರದ ಕೊರತೆ ಉಂಟಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು. ಕೇಂದ್ರ ಸರ್ಕಾರದ ವಿದೇಶಾಂಗ ನೀತಿಯನ್ನು ಟೀಕಿಸಿದ ಅವರು, ಅಮೆರಿಕಾ ಮತ್ತು ಇಸ್ರಾಯಿಲ್ ಜೊತೆಗಿನ ಹತ್ತಿರದ ಸಂಬಂಧವು ದೇಶದ ಆರ್ಥಿಕ ಹಾಗೂ ಸಾಮಾಜಿಕ ಸ್ಥಿತಿಗೆ ಹೊರೆ ಆಗುತ್ತಿದೆ ಎಂದು ಹೇಳಿದರು.

ದೇಶದ ಒಳಗಿನ ಸಮಸ್ಯೆಗಳ ಕುರಿತಾಗಿ ಹೊಸ ಕಾರ್ಮಿಕ ಕಾಯ್ದೆಗಳು, ಕೃಷಿಗೆ ಹಾನಿಕಾರ ಕವಾಗಬಹುದಾದ ವ್ಯಾಪಾರ ಒಪ್ಪಂದಗಳು, ಮನರೇಗಾ ದುರ್ಬಲಗೊಳಿಸುವ ಕ್ರಮಗಳು ಹಾಗೂ ಯುಜಿಸಿ ನಿಯಮಗಳು ಜನರ ಅಸಮಾಧಾನವನ್ನು ಹೆಚ್ಚಿಸುತ್ತಿವೆ ಎಂದು ಆರೋಪಿಸಿದರು. ಎಸ್‌ಐಆರ್ ಮೂಲಕ ದಲಿತರು, ಅಲ್ಪಸಂಖ್ಯಾತರು ಹಾಗೂ ಆದಿವಾಸಿಗಳ ಮತದಾನದ ಹಕ್ಕು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. 2026-27ರಲ್ಲಿ ಮಹಾಡ್ ಸತ್ಯಾಗ್ರಹ ಮತ್ತು ಮನುಸ್ಮೃತಿ ದಹನದ ಶತಮಾನೋತ್ಸವಗಳು ಹಾಗೂ ಜ್ಯೋತಿಬಾ ಫುಲೆ ಅವರ 200ನೇ ಜನ್ಮದಿನದ ಹಿನ್ನೆಲೆ ಸಾಮಾಜಿಕ ನ್ಯಾಯ ಹಾಗೂ ಸಮಾನತೆಯ ಹೋರಾಟವನ್ನು ಬಲಪಡಿಸುವ ಅಗತ್ಯವಿದೆ ಎಂದು ಕರೆ ನೀಡಿದರು. ಸಾಮ್ರಾಜ್ಯಶಾಹಿ ಮತ್ತು ಫ್ಯಾಸಿಸ್ಟ್ ಶಕ್ತಿಗಳ ವಿರುದ್ಧ ಸಂಘಟಿತ ಹೋರಾಟವನ್ನು ಬಲಪಡಿಸಲು ಪಕ್ಷ ಬದ್ಧವಾಗಿದೆ. ದೇಶವನ್ನು ಸ್ವಾಯತ್ತ, ಧರ್ಮನಿರಪೇಕ್ಷ ಮತ್ತು ಸಮಾಜವಾದಿ ಪ್ರಜಾತಂತ್ರ ಗಣರಾಜ್ಯವನ್ನಾಗಿ ರೂಪಿಸುವುದೇ ಗುರಿಯಾಗಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರಾದ ಜಿಲಾನಿ ಯರಗೇರಾ, ಭೀಮಯ್ಯ, ಹನೀಫ್ ಅಬಕಾರಿ, ಮಹಾದೇವಮ್ಮ, ಶಾಂತಮ್ಮ, ರಂಗಮ್ಮ, ಯಂಕಮ್ಮ, ಎನ್ ಮಹಾದೇವಮ್ಮ, ಸುನಿತಾ, ನರಸಿಂಹಲು, ಸಣ್ಣ ತಾಯಪ್ಪ ಹಾಗೂ ಆಂಜನೇಯ ಉಪಸ್ಥಿತರಿದ್ದರು.

## 24 ರಂದು ಟಿಯುಸಿಐ ಜಿಲ್ಲಾ ಕಾರ್ಮಿಕ ಸಮಾವೇಶ-ಎಂ.ಗಂಗಾಧರ

ಎಂದು ತಿಳಿಸಿದರು. ಸಮಾವೇಶದಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್, ಜಿಲ್ಲಾ ಉಸ್ತುವಾರಿ ಡಾ.ಶರಣ ಪ್ರಕಾಶ್ ಪಾಟೀಲ್, ಜಿಲ್ಲಾಧಿಕಾರಿ ಕೆ.ನಿತಿಶ್, ಸಂಘದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಆರ್.ಮಾನಸಯ್ಯ, ರಾಜ್ಯಾಧ್ಯಕ್ಷ ಎಂ.ಡಿ.ಅಮಿರ ಅಲಿ, ಪ್ರಮುಖರಾದ ಸುರೇಶ್ ಭದ್ರಾವತಿ, ಬಸವರಾಜ್ ಶೀಲವಂತರ್ ಸೇರಿ ಹಲವರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಈ ಮಹತ್ವದ ಸಮಾವೇಶಕ್ಕೆ ರಾಯಚೂರು ಜಿಲ್ಲೆಯ ಕೃಷಿ,ಹಾಸ್ಟೆಲ್, ವಸತಿ ಶಾಲೆ,ಕಂದಾಯ,ಗಣಿ,ನೀರಾವರಿ,ಆರೋಗ್ಯ, ಇಂಧನ,ಜಿಲ್ಲಾ ಪಂಚಾಯತ್ ಸೇರಿದಂತೆ ಎಲ್ಲ ಇಲಾಖೆಗಳ ಗುತ್ತಿಗೆ ಕಾರ್ಮಿಕರು ಭಾಗವಹಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಬದಲ್ಲಿ ಜಿ.ಅಡವಿರಾವ್, ಮಹ್ಮದ ಶಫಿ, ನಾಗರಾಜ, ಎಂ.ನಿರಂಜನ ಸೇರಿ ಇತರಿದ್ದರು.

## ಬಸವೇಶ್ವರ ಜಯಂತಿ ಅಂಗವಾಗಿ ಅದ್ದೂರಿ ಭಾವಚಿತ್ರ ಮೆರವಣಿಗೆ

ಮುಖ್ಯ ಅತಿಥಿಗಳಾಗಿ ನಗರ ಶಾಸಕ ಡಾ.ಎಸ್.ಶಿವರಾಜ ಪಾಟೀಲ, ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಹಾಗೂ ಮಹಾಸಭಾ ಜಿಲ್ಲಾಧ್ಯಕ್ಷ ಚಂದ್ರಶೇಖರ ಪಾಟೀಲ ಮಿರ್ಜಾಪೂರ ಅವರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮೊದಲು ವೀರಭದ್ರೇಶ್ವರ ದೇವರ ದರ್ಶನ ಪಡೆದು ಜಗಜ್ಯೋತಿ ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಂಗಳಾರತಿ ಬೆಳಗುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭವಾದ ಮೆರವಣಿಗೆ ಪುರವಂತಿಕೆ ಸೇವೆ, ವಡಪುಗಳ ಸೇವೆ, ಕಾಶಿ ಧಾರಣೆ, ಡೊಳ್ಳು-ಬಾಜಾ ಭಜಂತ್ರಿಗಳೊಂದಿಗೆ ಭರ್ಜರಿಯಾಗಿ ಸಾಗಿತು. ಸರದಾರ ವಲ್ಲಭಭಾಯಿ ಪಟೇಲ್ ವೃತ್ತ, ಪಟೇಲ್ ರಸ್ತೆ, ಶೆಟ್ಟಿಭಾವಿ ವೃತ್ತ, ಸರಾಫ್ ಬಜಾರ್, ತೀನ್ ಕಂದೀಲ್ ವೃತ್ತ, ಕೇಂದ್ರ ತರಕಾರಿ ಮಾರುಕಟ್ಟೆ, ಮಹಾವೀರ ವೃತ್ತ, ಅರಭ್ ಮೊಹಲ್ಲಾ ರಸ್ತೆ, ಮಹಾತ್ಮ ಗಾಂಧಿ ವೃತ್ತ ಮೂಲಕ ಬಸವೇಶ್ವರ ರಸ್ತೆ ಹಾದು ವೀರಶೈವ ಮಹಾಂತೇಶ ಕಲ್ಯಾಣ ಮಂಟಪ ತಲುಪಿತು.ಮೆರವಣಿಗೆಯಲ್ಲಿ ನೂರಾರು ಮಹಿಳೆಯರು ಒಂದೇ ಬಣ್ಣದ ಸೀರೆಯನ್ನು ಧರಿಸಿ ಭಾಗವಹಿಸಿದ್ದು ವಿಶೇಷ ಆಕರ್ಷಣೆಯಾಗಿದ್ದು, ಇದು ಬಸವ ಜಯಂತಿ ಆಚರಣೆಯಲ್ಲಿ ಗಮನಾರ್ಹ ಕ್ಷಣವಾಯಿತು. ಮೆರವಣಿಗೆ ವೇಳೆ ಪೊಲೀಸ್ ಇಲಾಖೆ ಬಸವರಾಜ ಪಿ.ಎಸ್.ಐ. ನೇತೃತ್ವದಲ್ಲಿ ಭದ್ರತಾ ವ್ಯವಸ್ಥೆ ಕಲ್ಪಿಸಿತ್ತು. ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರು, ವೀರಶೈವ ಲಿಂಗಾಯತ ಸಮಾಜದ ಪದಾಧಿಕಾರಿಗಳು, ಮುಖಂಡರು, ಜನಪ್ರತಿನಿಧಿಗಳು, ನೂರಾರು ಮಹಿಳೆಯರು, ಯುವಕರು ಹಾಗೂ ಭಕ್ತರು ಉಪಸ್ಥಿತರಿದ್ದರು.

## 25ರಂದು ಶ್ರೀ ಗಿರಿ ಅಭಯ ಆಂಜಿನೇಯ್ಯ ದೇವಸ್ಥಾನ ಸಮಿತಿಯಿಂದ ಗ್ರಂಥಲೋಕಾರ್ಪಣೆ, ಅಭಿನಂದನಾ ಸಮಾರಂಭ-ಬಿ.ಬಸವರಾಜ

ಪರಿಷತ್ ನಿಕಟಪೂರ್ವ ಅಧ್ಯಕ್ಷ ಮಹಾಂತೇಶ ಮಸ್ಕಿ ಪರಿಚಯಿಸಲಿದ್ದಾರೆ. ಮಾಜಿ ಶಾಸಕ ಎ.ಪಾಪಾರೆಡ್ಡಿ ಸೇರಿ ಅನೇಕ ಗಣ್ಯರು ಆಗಮಿಸಲಿದ್ದಾರೆ. ಸಂಜೆ 6.30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸಾನಿಧ್ಯವನ್ನು ಮಟಮಾರಿ ಶಿವಾನಂದ ಮಠದ ಶ್ರೀ ಜ್ಞಾನಾನಂದಸ್ವಾಮೀಜಿ ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮವನ್ನು ರಾಘವೇಂದ್ರ ಕುಷ್ಟಗಿ ಉದ್ಘಾಟಿಸಲಿದ್ದಾರೆ. ಕೆಪಿಸಿ ಜನರಲ್ ಮ್ಯಾನೇಜರ್ ನಿಜೇಂದ್ರ ಜ್ಯೋತಿ ಬೆಳಗಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಅಂಬಣ್ಣ ಆರೋಲಿ, ಕೆ.ಎಂ.ಪಾಟೀಲ್, ಕೆ.ಪಂಪಾಪತಿ, ಡಾ.ರಿಯಾಜುದ್ದೀನ್, ಜ್ಯೋತಿ ಗೋಪಾಲ, ಜಂಬಣ್ಣ ಯಕ್ಲಾಸಪುರು ಸೇರಿ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಎಂದರು. ಈ ಸಂದರ್ಬದಲ್ಲಿ ರವೀಂದ್ರ ಜಲ್ದಾರ, ರಾಮಣ್ಣ, ಚಂದ್ರಶೇಖರ ಸೇರಿ ಅನೇಕರಿದ್ದರು.

# ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ವೆ ಒತ್ತಡ: ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಏ.22-**ಜನಗಣತಿ ಸರ್ವೆ ಕಾರ್ಯಕ್ಕೆ ಸಂಬಂಧಿಸಿದಂತೆ ಯಾವುದೇ ಸ್ಪಷ್ಟ ಆದೇಶ ನೀಡದೇ ಅಂಗನವಾಡಿ ಕಾರ್ಯಕರ್ತೆಯರನ್ನು ಸರ್ವೆ ಕೆಲಸಕ್ಕೆ ನಿಯೋಜಿಸಿ, ಮಾನಸಿಕ ಒತ್ತಡ ಹಾಗೂ ಬೆದರಿಕೆ ಹಾಕುತ್ತಿರುವುದನ್ನು ಖಂಡಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿ.ಐ.ಟಿ.ಯು) ವತಿಯಿಂದ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಸರ್ಕಾರದ ನಿಯಮಗಳ ಪ್ರಕಾರ ಜನಗಣತಿ ಸರ್ವೆಗೆ ಸರ್ಕಾರಿ ನೌಕರರು ಹಾಗೂ ಪದವೀಧರರನ್ನು ಮಾತ್ರ ಆಯ್ಕೆ ಮಾಡಬೇಕಾಗಿದ್ದರೂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ನಿಯಮ ಉಲ್ಲಂಘಿಸಿ 50 ವರ್ಷ ಮೇಲ್ಪಟ್ಟವರು, ಅನಾರೋಗ್ಯದಿಂದ ಬಳಲುತ್ತಿರುವವರು ಹಾಗೂ ಎಸ್‌ಎಸ್



ಎಲ್‌ಸಿ ಪಾಸಾದವರನ್ನೂ ಸರ್ವೆ ಕಾರ್ಯಕ್ಕೆ ನಿಯೋಜಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಸರ್ವೆಗೆ ಅಗತ್ಯವಾದ ತರಬೇತಿ ನೀಡದೇ, ಕೆಲವರ ಮೊಬೈಲ್‌ಗಳಲ್ಲಿ ಸರ್ವೆ ಆಪ್ ಡೌನ್ ಲೋಡ್ ಆಗದಿದ್ದರೂ ಕಡ್ಡಾಯವಾಗಿ ಕೆಲಸ ಮಾಡಬೇಕೆಂದು ಒತ್ತಡ ಹಾಕಲಾಗುತ್ತಿದೆ. ಇದರಿಂದ ಅಂಗನವಾಡಿ ಕಾರ್ಯಕರ್ತೆಯರು ಮಾನಸಿಕ ಕಿರುಕುಳಕ್ಕೆ ಒಳಗಾಗುತ್ತಿದ್ದಾರೆ ಎಂದು ದೂರಿದರು.

ನಗರದ ಅಂಬಾಭವಾನಿ ಪ್ರದೇಶದ ಜಹೀರಾಬಾದ್ ಬಡಾವಣೆಯ ಅಂಗನವಾಡಿ ಕಾರ್ಯಕರ್ತೆ ರತ್ನ ಅವರಿಗೆ ಯಾವುದೇ ಪೂರ್ವ ಸೂಚನೆ ಇಲ್ಲದೆ, ಪೊಲೀಸರೊಂದಿಗೆ ಮನೆಗೆ ತೆರಳಿ ನೋಟಿಸ್ ನೀಡಿರುವುದು ಅತಿರೇಕದ ಕ್ರಮವಾಗಿದೆ ಎಂದು ಖಂಡಿಸಿದರು.

ಸುಖಶಾಂತಿ ನಗರದ ಕಾರ್ಯಕರ್ತೆಯರ ಮೇಲೂ ಇದೇ ರೀತಿಯ ಒತ್ತಡ ಹಾಗೂ ಕ್ರಮದ ಬೆದರಿಕೆ ಮುಂದುವರಿದಿದೆ.

ಅನಾರೋಗ್ಯದಿಂದ ಬಳಲುತ್ತಿರುವ ಹಾಗೂ 50 ವರ್ಷ ಮೇಲ್ಪಟ್ಟ ಕಾರ್ಯಕರ್ತೆಯರನ್ನು ಸರ್ವೆ ಕೆಲಸಗಳಿಂದ ವಿನಾಯಿತಿ ನೀಡಬೇಕೆಂಬ ಸರ್ಕಾರದ ಆದೇಶಗಳನ್ನು ಪಾಲಿಸದೆ ಅಧಿಕಾರಿಗಳು ದಬ್ಬಾಳಿಕೆ ನಡೆಸುತ್ತಿದ್ದಾರೆ. ತಮ್ಮ ಬದಲಿಗೆ ಮತ್ತೊಬ್ಬರನ್ನು ನೇಮಕ ಮಾಡಿಕೊಳ್ಳುವಂತೆ ಒತ್ತಾಯಿಸುವುದು ಅಧಿಕಾರ ದುರುಪಯೋ ಘಗವಾಗಿದೆ ಎಂದು ಆರೋಪಿಸಿದರು.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ಅನಾರೋಗ್ಯದಿಂದ ಬಳಲುತ್ತಿರುವ ಹಾಗೂ 50 ವರ್ಷ ಮೇಲ್ಪಟ್ಟ ಅಂಗನವಾಡಿ ಕಾರ್ಯಕರ್ತೆಯರನ್ನು ಸರ್ವೆ ಕೆಲಸಗಳಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿಜಿಲ್ಲಾ ಅಧ್ಯಕ್ಷೆ ಹೆಚ್. ಪದ್ಮಾ ಹಾಗೂ ಪ್ರಧಾನ ಕಾರ್ಯದರ್ಶಿ ಡಿ.ಎಸ್. ಶರಣಬಸವ, ಮಮತಾ ಬ್ಯಾಗಮ್ಮ, ರೇಖಾ, ಉರುಕುಂದಮ್ಮ, ಮಹಾದೇವಿ ಅನೇಕರು ಇದ್ದರು.

# ದಲಿತ ಶಕ್ತಿ ಪಡೆಯಿಂದ 25 ರಂದು ಡಾ.ಬಿ.ಆರ್.ಅಂಬೇಡ್ಕರ ಜಯಂತಿ: ಮೆರವಣಿಗೆ, ಉಪನ್ಯಾಸ- ಆನಂದರಾಜ್



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.22-**ಡಾ.ಬಾಬಾಸಾಹೇಬ ಅಂಬೇಡ್ಕರವರ 135 ನೇ ಜಯಂತಿಯನ್ನು ಏ.25 ರಂದು ಭೀಮ ಜಯಂತಿ ಸಂಭ್ರಮ ಕಾರ್ಯಕ್ರಮ ಸಂಜೆ 5 ಗಂಟೆಗೆ ಆಯೋಜಿಸಲಾಗಿದೆ ಎಂದು ದಲಿತ ಶಕ್ತಿ ಪಡೆಯ ಜಿಲ್ಲಾಧ್ಯಕ್ಷ ಆನಂದರಾಜ್ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಅಂದು ಸ್ಟೇಷನ್ ವೃತ್ತದಿಂದ ಅಂಬೇಡ್ಕರ ವೃತ್ತವದವರೆಗೆ ಕಾಲ್ನಿಡಿಗೆ ಜಾಥಾ, ಆರ್‌ಡಿಓ ವೃತ್ತದಿಂದ ಬೈಕ್ ರ್‍ಯಾಲಿ ನಡೆಯಲಿದೆ.ನಂತರ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ವೇದಿಕೆ ಕಾರ್ಯಕ್ರಮ ನಡೆಯುತ್ತದೆ. ಸಾರ್ವಜನಿಕರು, ಅಂಬೇಡ್ಕರ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಜೈಪಾಲ್ ಮಾತನಾಡಿ ಅದ್ದೂರಿಯಾಗಿ ಡಾ.ಅಂಬೇಡ್ಕರ ಜಯಂತಿಯನ್ನು ಆಚರಿಸಲು ನಿರ್ಧರಿಸಲಾಗಿದ್ದು ವಾದ್ಯಗಳೊಂದಿಗೆ ಮೆರವಣಿಗೆ ನಡೆಸಲಾಗುತದೆ. ಡಾ.ಅಂಬೇಡ್ಕರ ಜೀವನ, ಸಾಧನೆ, ಕೊಡುಗೆಗಳ ಕುರಿತು ಅನೇಕರು ಮಾಹಿತಿ ನೀಡಲಿದ್ದಾರೆ ಎಂದರು.

ಈ ಸಂದರ್ಬದಲ್ಲಿ ಜೋನಾಥನ್, ಲಾಲಾನಾಯಕ,ವಿಶ್ವನಾಥ ಬಲ್ಲಿದವ, ದೀಪಕ ಭಂಡಾರಿ, ಮಾರ್ಕಟ ರಾಜು ,ನರಸಿಂಹಲು, ಶಿವರಾಜ ರಾಂಪೂರು, ವಿರೇಶ ಸೇರಿ ಅನೇಕರಿದ್ದರು.

# ಶ್ರೀ ಬಾಲವೀರಾಂಜನೇಯ ದೇವಸ್ಥಾನದ ನೂತನ ವಿಗ್ರಹಗಳ ಪ್ರತಿಷ್ಠಾಪನೆ: ಶಿಲಾ ವಿಗ್ರಹಗಳ ಮೆರವಣಿಗೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.22-**ನಗರದ ಚಂದ್ರಮೌಳೇಶ್ವರ ಬಳಿಯ ಶ್ರೀ ಬಾಲಾವೀರಾಂಜನೇಯ್ಯ ದೇವಸ್ಥಾನದ ಮೂರ್ತಿ ಪುನರ್ ಪ್ರತಿಷ್ಠಾಪನೆ ಅಂಗವಾಗಿ ಶಿಲಾವಿಗ್ರಹಣ ಅದ್ದೂರಿ ಮೆರವಣಿಗೆ ನಡೆಸಲಾಯಿತು.

ಮಹಿಳೆಯರ ಪೂರ್ಣ ಕುಂಭ ಕಳಸದೊಂದಿಗೆ ಶಿಲಾವಿಗ್ರಹಣ ಮೆರವಣಿಗೆ ನಡೆಸಲಾಯಿತು. ನಂತರ ಕಿಲ್ಲೆ ಬೃಹನ್ಮಠದ ಶ್ರೀ ಶಾಂತಮಲ್ಲ ಶಿವಾಚಾರ್ಯರು,ಸೋಮವಾರಪೇಟೆ ಮಠದ ಶ್ರೀ ಅಭಿನವ ರಾಚೋಟಿ ವೀರಶಿವಾಚಾರ್ಯರು ಸಾನಿಧ್ಯದಲ್ಲಿ ಪೂಜಾ ಕೈಂಕರ್ಯಗಳನ್ನು ನಡೆಸಲಾಯಿತು.


ಜಲಾದಿವಾಸ, ಧಾನ್ಯದಿವಾಸ, ಶೈಯಾದಿವಾಸ, ಗಣಪತಿ ಪೂಜೆ, ಉಮಾಮಹೇಶ್ವರ ಪೂಜೆಗಳೊಂದಿಗೆ ಗಣಹೋಮ, ಪವಮಾನ ಹೋಮಗಳು ನಡೆದವು. ನೂರಾರು ಜನ ಭಕ್ತರು, ಮಹಿಳೆಯರು ಭಾಗಿಯಾದರು.

# ಮಾಜಿ ಸ್ಪೀಕರ್ ರಮೇಶ್ ಕುಮಾರ್ ಅರಣ್ಯ ಭೂಮಿ ಒತ್ತುವರಿ ಭೂಮಿ ಹಸ್ತಾಂತರಕ್ಕೆ ಆದೇಶ ಸಂಬಂಧ ತಾತ್ಕಾಲಿಕ ರಿಲೀಫ್ ನೀಡಿದ ಹೈಕೋರ್ಟ್

**ಬೆಂಗಳೂರು,ಏ.22-**ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಜಿನಗಲಕುಂಟೆ ಅರಣ್ಯ ವಲಯದ ಹೊಸಹುಡ್ಯ ಗ್ರಾಮದಲ್ಲಿ ಅರಣ್ಯ ಭೂಮಿ ಒತ್ತುವರಿ ಮಾಡಿರುವ 60 ಎಕರೆ 23 ಗುಂಟೆ ಜಮೀನನ್ನು 30 ದಿನಗಳೊಳಗೆ ತೆರವುಗೊಳಿಸಿ ಹಸ್ತಾಂತರಿಸಬೇಕೆಂದು ಮೇಲ್ಮನವಿ ಪ್ರಾಧಿಕಾರ ಹಾಗೂ ಅರಣ್ಯ ಸಂರಕ್ಷಣಾಧಿಕಾರಿ (ಪ್ರಾದೇಶಿಕ-ಬೆಂಗಳೂರು) ಮಾಡಿರುವ ಆದೇಶಕ್ಕೆ ಹೈಕೋರ್ಟ, ಮುಂದಿನ ವಿಚಾರಣೆವರೆಗೂ ಬಲವಂತದ ಕ್ರಮ ಕೈಗೊಳ್ಳದಂತೆ ಆದೇಶಿಸಿದೆ.

ಮಾಜಿ ಸ್ಪೀಕರ್ ರಮೇಶ್ ಕುಮಾರ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಂ ಅವರಿದ್ದ ಏಕ ಸದಸ್ಯಪೀಠ ಈ ಮಧ್ಯಂತರ ಆದೇಶ ನೀಡಿದ್ದು, ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ





ವಕೀಲರು, ಪ್ರಾರಂಭದಲ್ಲಿ ಸರ್ವೇ ಸೆಟಲ್ಮೆಂಟ್ ಆಗಿಲ್ಲ ಮತ್ತು ಅರಣ್ಯದ ಗಡಿಯೇ ನಿಗದಿಯಾಗಿಲ್ಲ. ಜತೆಗೆ ಎರಡು ಸರ್ವೇ ನಂಬರ್ ಸಂಬಂಧ ವಿವಾದವಿದೆ. ಸರ್ವೇ ನಂಬರ್ 1ಕ್ಕೂ ಅರ್ಜಿದಾರರಿಗೂ ಸಂಬಂಧವಿಲ್ಲ. ಸರ್ವೇ ನಂಬರ್ 2ರಲ್ಲಿಅರ್ಜಿದಾರರ ಭೂಮಿ ಇದೆ. ದಾಖಲೆಗಳ ಮೂಲದ ಪ್ರಕಾರ 113 ಎಕರೆ ಅರಣ್ಯ ಭೂಮಿ ಎನ್ನಲಾಗಿದೆ. ಆದರೆ, ಅರಣ್ಯ ಇಲಾಖೆ ಇದೀಗ 245 ಎಕರೆ ಭೂಮಿ ತನಗೆ ಸೇರಿದ್ದೆಂದು ಹಕ್ಕು ಮಂಡಿಸುತ್ತಿದೆ ಎಂದು ನ್ಯಾಯಪೀಠಕ್ಕೆ ವಿವರಿಸಿದರು.

ಅಲ್ಲದೆ, ಈ ಹಿಂದೆ ಜಿಲ್ಲಾಧಿಕಾರಿ ಎರಡು ಬಾರಿ ಸ್ಥಳ ಪರಿಶೀಲನೆ ನಡೆಸಿ ಜಂಟಿ ವರದಿಯನ್ನು ಸಲ್ಲಿಸಿದ್ದಾರೆ. ಅದರಲ್ಲಿ ಅರಣ್ಯ ಇಲಾಖೆ ತನ್ನದೆಂದು ಹಕ್ಕು ಮಂಡಿಸುತ್ತಿರುವ ಭೂಮಿಯ ಕುರಿತು ಯಾವುದೇ ದಾಖಲೆ ಸಲ್ಲಿಸಿಲ್ಲ. ಮೇಲಾಗಿ 50-60 ವರ್ಷಗಳ ಹಿಂದೆಯೇ ಕಂದಾಯ ಇಲಾಖೆ ಭೂಮಿಯನ್ನು ಹಲವರಿಗೆ ಮಂಜೂರು ಮಾಡಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಕರ್ನಾಟಕ ಅರಣ್ಯ ಕಾಯ್ದೆ ಸೆಕ್ಷನ್ 19ರಡಿ ಅರಣ್ಯದ ಗಡಿಯನ್ನು ನಿಗದಿ ಮಾಡದ ಹೊರತು ಯಾವುದೇ ತೀರ್ಮಾನ ಕೈಗೊಳ್ಳುವಂತಿಲ್ಲ. ಆದರೆ, ಮೇಲ್ಮನವಿ ಪ್ರಾಧಿಕಾರ ಡಿಸಿ ವರದಿ ಸೇರಿದಂತೆ ಯಾವ ಅಂಶಗಳನ್ನೂ ಪರಿಗಣಿಸದೆ ತೆರವುಗೊಳಿಸಬೇಕು ಎಂದು ಆದೇಶಿಸಿದ್ದು, ಇದು ಕಾನೂನು ಬಾಹಿರ ಎಂದು ಘೋಷಣೆ ಮಾಡಬೇಕು ಎಂದು ಕೋರಿದರು.

ಪ್ರಕರಣದ ಹಿನ್ನೆಲೆ : ಕಳೆದ ಎ.10ರಂದು ರಮೇಶ್ ಕುಮಾರ್ ಸಲ್ಲಿಸಿದ್ದ ಮೇಲ್ಮನವಿಯನ್ನು ತಿರಸ್ಕರಿಸಿದ್ದ ಮೇಲ್ಮನವಿ ಪ್ರಾಧಿಕಾರ, 2011ರ ಜೂ.24ರಂದು ಕೋಲಾರ ವಲಯದ ಉಪ ಅರಣ್ಯ ಸಂರಕ್ಷಣಾಧಿಕಾರಿಯು ಒತ್ತುವರಿ ತೆರವಿಗೆ ಆದೇಶಿಸಿದ್ದ ಕ್ರಮ ಎತ್ತಿಹಿಡಿದಿದೆ. 2025ರ ಜ.15 ಹಾಗೂ 16ರಂದು ನಡೆಸಿದ ಜಂಟಿ ಸಮೀಕ್ಷೆಯಲ್ಲಿ ಒತ್ತುವರಿ ಆಗಿರುವುದು ದೃಢಪಟ್ಟಂತೆ ಹೊಸಹುಡ್ಯ ಗ್ರಾಮದ ಸರ್ವೇ ಸಂಖ್ಯೆ 1ರಲ್ಲಿ 6 ಎಕರೆ ಮತ್ತು ಸರ್ವೇ ಸಂಖ್ಯೆ 2ರಲ್ಲಿನ 54 ಎಕರೆ 23 ಗುಂಟೆ ಸೇರಿ ಒಟ್ಟು 60 ಎಕರೆ 23 ಗುಂಟೆ ಜಮೀನನ್ನು ತೆರವುಗೊಳಿಸಬೇಕು ಎಂದು ಆದೇಶಿಸಿದ್ದಾರೆ.

ಮೇಲ್ಮನವಿ ಪ್ರಾಧಿಕಾರ ಹಾಗೂ ಅರಣ್ಯ ಸಂರಕ್ಷಣಾಧಿಕಾರಿ ಹೊರಡಿಸಿರುವ ಆದೇಶ ರದ್ದುಪಡಿಸಬೇಕು ಮತ್ತು ಕೋಲಾರ ಜಿಲ್ಲಾಧಿಕಾರಿ ಮೂರು ಬಾರಿ ಸಲ್ಲಿಸಿರುವ ವರದಿ ಸಂಬಂಧ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿದ್ದಾರೆ.


# ಚಾಮರಾಜನಗರಕ್ಕೆ ಬಂದರೆ ಅಧಿಕಾರ ಹೋಗುತ್ತದೆ ಎನ್ನುವುದು ಮೂಢನಂಬಿಕೆ: ಈ ಮೌಢ್ಯದಲ್ಲಿ ನನಗೆ ನಂಬಿಕೆಯಿಲ್ಲ; ಸಿದ್ದರಾಮಯ್ಯ

**ಚಾಮರಾಜನಗರ,ಏ.22-**2021ರಲ್ಲಿ ಕೊರೊನಾ ಸೋಂಕಿನ 2ನೇ ಅಲೆಯ ವೇಳೆ ಚಾಮರಾಜನಗರ ಸರ್ಕಾರಿ ಆಸ್ಪತ್ರೆಯಲ್ಲಿ ಆಕ್ಸಿಜನ್ ಕೊರತೆಯಿಂದಾಗಿ ಉಂಟಾದ ದುರಂತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಕೊನೆಗೂ ಸರ್ಕಾರಿ ನೌಕರಿ ಸಿಕ್ಕಿದೆ.ಮಂಗಳವಾರ ಗುಂಡ್ಲುಪೇಟೆಯಲ್ಲಿ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೃತರ ಕುಟುಂಬ ಸದಸ್ಯರಿಗೆ ಕಾಯಂ ಸರ್ಕಾರಿ ಉದ್ಯೋಗದ ನೇಮಕಾತಿ ಪತ್ರವನ್ನು ಹಸ್ತಾಂತರಿಸಿದರು. ಈ ಮೂಲಕ ಸಂತ್ರಸ್ತ ಕುಟುಂಬಗಳ 5 ವರ್ಷಗಳ ನಿರಂತರ ಹೋರಾಟಕ್ಕೆ ಕೊನೆಗೂ ಪ್ರತಿಫಲ ಸಿಕ್ಕಂತಾಯಿತು.

2021 ಮೇ 2 ರ ರಾತ್ರಿ ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ 34 ಮಂದಿ ಕೋವಿಡ್ ರೋಗಿಗಳು ಆಮ್ಲಜನಕದ ಕೊರತೆಯಿಂದಾಗಿ ಮೃತಪಟ್ಟಿದ್ದರು. ಸಂತ್ರಸ್ತ ಕುಟುಂಬದ ಸದಸ್ಯರು ಸೂಕ್ತ ಪರಿಹಾರಕ್ಕೆ ಆಗ್ರಹಿಸಿ ಕಳೆದ 5 ವರ್ಷಗಳಿಂದಲೂ ಹೋರಾಟ ನಡೆಸಿದ್ದರು.

ಬಿಜೆಪಿ ಸರ್ಕಾರದ ನಂತರ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಇವರೆಲ್ಲರಿಗೂ ಸರ್ಕಾರಿ ಹುದ್ದೆ ನೇಮಕಾತಿಯ ಭರವಸೆ ನೀಡಿತ್ತು. ಅದರಂತೆ ಗುಂಡ್ಲುಪೇಟೆಯಲ್ಲಿ ಮಂಗಳವಾರ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಚಾಲನೆ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ, ಆಕ್ಸಿಜನ್ ದುರಂತ ಸಂತ್ರಸ್ತ 25 ಕುಟುಂಬಗಳ ಸದಸ್ಯರಿಗೆ ಕಾಯಂ ಸರ್ಕಾರಿ ಉದ್ಯೋಗ ನೇಮಕಾತಿ ಪತ್ರ ವಿತರಿಸಿದ್ದಾರೆ.

ಭಾರತ್ ಜೋಡೋ ಪಾದಯಾತ್ರೆಯ ಸಂದರ್ಭ



ರಾಹುಲ್ ಗಾಂಧಿ ಹಾಗೂ ಡಿ.ಕೆ.ಶಿವಕುಮಾರ್ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರನ್ನು ಭೇಟಿಮಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಸರ್ಕಾರಿ ಉದ್ಯೋಗ ನೀಡುವ ಭರವಸೆ ನೀಡಿದ್ದರು.

ಚಾಮರಾಜನಗರಕ್ಕೆ ಬಂದರೆ ಅಧಿಕಾರ ಕಳೆದುಕೊಳ್ಳಬೇಕಾಗುತ್ತದೆ ಎನ್ನುವುದು ಒಂದು ಮೌಢ್ಯ. ಇಂತಹ ಮೂಢನಂಬಿಕೆಗಳಲ್ಲಿ ನನಗೆ ನಂಬಿಕೆಯಿಲ್ಲ. ಹಾಗಾಗಿ ಚಾಮರಾಜನಗರಕ್ಕೆ ಸಾಕಷ್ಟು ಬಾರಿ ಭೇಟಿ ನೀಡುತ್ತಿದ್ದೇನೆ. ಇಲ್ಲಿಗೆ ಬಂದರೆ ಕುರ್ಚಿ ಗಟ್ಟಿಯಾಗುತ್ತದೆ ಎಂದು ಪ್ರಾಸಂಗಿಕವಾಗಿ ಹೇಳಿದ್ದೆ ಅಷ್ಟೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಜೆಡಿಎಸ್ ಶಾಸಕ ಶರಣಗೌಡ ಕಂದಕೂರು ಅವರು ಸರ್ಕಾರ ಆಕಸ್ಮಿಕ ಸಾವುಗಳಿಗೆ ನೀಡುವ ಪರಿಹಾರದ ಬಗ್ಗೆ ತಪ್ಪು ಕಲ್ಪನೆಯಿಂದ ಪತ್ರ ಬರೆದಿದ್ದಾರೆ. ಎಲ್ಲರಿಗೂ ಪರಿಹಾರ ನೀಡಲಾಗುತ್ತಿದೆ, ನಮ್ಮ ಗಮನಕ್ಕೆ ಬಂದರೆ ಪರಿಹಾರ ನೀಡುತ್ತೇವೆ. ಶಾಸಕರು ಕೇಳಿದರೂ ಖಂಡಿತ ಕೊಡುತ್ತೇವೆ ಎಂದು ಸಿದ್ದರಾಮಯ್ಯ ವಿಶ್ವಾಸ ವ್ಯಕ್ತ ಪಡಿಸಿದರು.

# ಯುವ ರಾಜಕಾರಣಿಗಳಿಗೆ ಶಿಕ್ಷಣ ನೀಡಲು ಸರ್ಕಾರದಿಂದ ರಾಜಕೀಯ ಕಾಲೇಜು ಸ್ಥಾಪನೆಗೆ ಯೋಜನೆ: ಬಸವರಾಜ ಹೊರಟ್ಟಿ

**ಬೆಂಗಳೂರು,ಏ.22-**ರಾಜ್ಯದ ರಾಜಕೀಯ ಇತಿಹಾಸ, ಮಹತ್ವದ ಶಾಸನ ಸಭೆಗಳ ಚರ್ಚೆಗಳು ಮತ್ತು ಮಾಜಿ ಮುಖ್ಯಮಂತ್ರಿಗಳು, ಸ್ಪೀಕರ್‌ಗಳು ಹಾಗೂ ಸಚಿವರ ಸಾಧನೆಗಳ ಬಗ್ಗೆ ಇಂದಿನ ಯುವ ರಾಜಕಾರಣಿಗಳಿಗೆ ತಿಳುವಳಿಕೆ ನೀಡಲು ಸರ್ಕಾರವು ರಾಜಕೀಯ ಕಾಲೇಜು ಆರಂಭಿಸುವ ಯೋಜನೆ ರೂಪಿಸಿದೆ.

ವಿಧಾನ ಪರಿಷತ್ ಅಧ್ಯಕ್ಷ ಬಸವರಾಜ ಹೊರಟ್ಟಿ ಅವರು ನಿನ್ನೆ ಮಂಗಳವಾರ ವಿಧಾನಸೌಧದಲ್ಲಿ ನಡೆದ ಮಾಜಿ ಸಚಿವ ಬಿ. ಬಸವಲಿಂಗಪ್ಪ ಅವರ ಜನ್ಮ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಈ ವಿಷಯ ತಿಳಿಸಿದರು.

ಇಂದಿನ ಅನೇಕ ಯುವ ರಾಜಕಾರಣಿಗಳಿಗೆ ರಾಮಕೃಷ್ಣ ಹೆಗಡೆ, ಕೆ.ಹೆಚ್. ಪಾಟೀಲ್ ಮತ್ತು ಬಿ. ಬಸವಲಿಂಗಪ್ಪ ಅವರಂತಹ ನಾಯಕರ ಬಗ್ಗೆ ಅರಿವು ಇಲ್ಲ. ಅವರಿಗೆ ಶಿಕ್ಷಣ ನೀಡುವ ಅಗತ್ಯವಿದೆ. ಹೊಸದಾಗಿ ಆಯ್ಕೆಯಾದ ಶಾಸಕರಿಗೆ ತರಬೇತಿ ನೀಡಬೇಕು. ಎಷ್ಟು ಜನ ಪುಸ್ತಕಗಳನ್ನು ಓದುತ್ತಾರೆ ಎಂದು ಕೇಳಿದರು.

ಹಿಂದಿನ ರಾಜಕಾರಣಿಗಳು ಮತ್ತು ಇಂದಿನ ರಾಜಕಾರಣಿಗಳ ನಡುವೆ ಬಹಳ ವ್ಯತ್ಯಾಸ ಇದೆ. ಪ್ರಸ್ತಾವಿತ ಕಾಲೇಜು ಮಹಾನ್ ನಾಯಕರ ಬಗ್ಗೆ ತಿಳುವಳಿಕೆ ನೀಡಲು ಸಹಾಯ ಮಾಡಬಹುದು ಎಂದು ಅಭಿಪ್ರಾಯಪಟ್ಟರು.

ಬಸವಲಿಂಗಪ್ಪ ಅವರ ಜೀವನ ಮತ್ತು ಕೆಲಸಗಳನ್ನು ಉಲ್ಲೇಖಿಸಿದ ಹೊರಟ್ಟಿ, 1970ರ ದಶಕದಲ್ಲಿ ದೇವರಾಜ್ ಅರಸು ನೇತೃತ್ವದ ಸರ್ಕಾರದಲ್ಲಿ ಸಚಿವರಾಗಿದ್ದಾಗ ನೀಡಿದ್ದ ವಿವಾದಾತ್ಮಕ ಬೂಸಾ (ಮೇವು) ಹೇಳಿಕೆ ಸಾಮಾಜಿಕ ಚರ್ಚೆಗೆ ಕಾರಣವಾಗಿ ಅಸಮಾನತೆಯನ್ನು ಪ್ರಶ್ನಿಸಲು ಜನರನ್ನು ಪ್ರೇರೇಪಿಸಿತು ಎಂದು ಹೇಳಿದರು. ದೇವರಾಜ ಅರಸು ಅವರು ಕೇವಲ ರಾಜಕಾರಣಿಯಷ್ಟೇ ಅಲ್ಲ, ದಲಿತ ಚಿಂತನೆಗೆ ದಾರಿ ತೋರಿದ ಬುದ್ಧಿಜೀವಿ. ಅವರಿಗೆ ಯಾವ ಇಲಾಖೆಯನ್ನೇ ನೀಡಿದರೂ ಅದನ್ನು ಆಳವಾಗಿ ಅಧ್ಯಯನ ಮಾಡಿ ಸದನದಲ್ಲಿ ಮಾತನಾಡುತ್ತಿದ್ದರು. ತಮ್ಮ ಇಲಾಖೆಗೆ ಸಂಬಂಧಿಸಿದ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರಗಳನ್ನು ನೀಡುತ್ತಿದ್ದರು ಎಂದು ಸ್ಮರಿಸಿದರು. ಕಾನೂನು ಸಚಿವ ಹೆಚ್.ಕೆ. ಪಾಟೀಲ್ ಅವರು ಮುಂದಿನ ಶತಮಾನೋತ್ಸವ ಕಾರ್ಯಕ್ರಮವನ್ನು ಧಾರವಾಡದಲ್ಲಿ ನಡೆಸುವಂತೆ ಆಯೋಜಕರಿಗೆ ಮನವಿ ಮಾಡಿದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L